MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER


ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 326 | ಶುಕ್ರವಾರ : 17-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 326 | FRIDAY : 17-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸರ್ಕಾರಿ ನೌಕರರಿಗೂ ಅಂಕುಶ

**ಬೆಂಗಳೂರು, ಅ. 16–** ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಚಟುವಟಿಕೆಗಳನ್ನು ನಿರ್ಬಂಧಿಸುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಚಿವ ಪ್ರಿಯಾಂಕ ಖರ್ಗೆ ಬರೆದಿದ್ದ ಪತ್ರ ಸಾಕಷ್ಟು ವಾಗ್ವಾದಗಳಿಗೆ ಎಡೆಮಾಡಿಕೊಟ್ಟಿರುವ ಬೆನ್ನಲ್ಲೆ, ಸಚಿವ ಪ್ರಿಯಾಂಕ ಖರ್ಗೆ ಅವರು ಸರ್ಕಾರಿ ನೌಕರರು ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಭಾಗಿಯಾಗದಂತೆ ನಿಷೇಧ ಜಾರಿಗೊಳಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತೊಂದು ಪತ್ರ ಬರೆದಿದ್ದಾರೆ.


ಪ್ರಿಯಾಂಕ್ ಖರ್ಗೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ & ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು

ಕೊಠಡಿ ಸಂಖ್ಯೆ: 242-243
2ನೇ ಮಹಡಿ, ವಿಕಾಸಸೌಧ,
ಬೆಂಗಳೂರು – 560 001
ದೂರವಾಣಿ: 080-22258965
080-22034647
ಇ-ಮೇಲ್: minister.rdpritbtkar@gmail.com

ಸಂಖ್ಯೆ: ಗ್ರಾ.ಅ & ಪಂ.ರಾ & ಐಟಿ & ಬಿಟಿ/ಸ/ 787 /2025
ದಿನಾಂಕ: 13.10.2025

ನಡವಳಿ

ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ನೌಕರರುಗಳಿಗೆ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು, 2021 ಅಡಿ ನಿಯಮ 5(1) ಪ್ರಕಾರ ಈ ಕೆಳಕಂಡ ನಿಯಮವು ಈಗಾಗಲೇ ಜಾರಿಯಲ್ಲಿರುತ್ತದೆ.

**"ಯಾರೇ ಸರ್ಕಾರಿ ನೌಕರನು, ಯಾವುದೇ ರಾಜಕೀಯ ಪಕ್ಷದ ಅಥವಾ ರಾಜಕಾರಣದಲ್ಲಿ ಭಾಗವಹಿಸುವಂಥ ಯಾವುದೇ ಸಂಘ ಸಂಸ್ಥೆಯ ಸದಸ್ಯನಾಗಿರತಕ್ಕದ್ದಲ್ಲ, ಅಥವಾ ಅವುಗಳೊಂದಿಗೆ ಅನ್ಯಥಾ ಸಂಬಂಧ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಚಳುವಳಿ ಅಥವಾ ಚಟುವಟಿಕೆಯಲ್ಲಿ ಭಾಗವಹಿಸತಕ್ಕದ್ದಲ್ಲ, ಅದರ ಸಹಾಯಾರ್ಥ ವಂತಿಗೆ ನೀಡತಕ್ಕದ್ದಲ್ಲ ಅಥವಾ ಅದಕ್ಕೆ ಯಾವುದೇ ರೀತಿಯ ನೆರವು ನೀಡತಕ್ಕದ್ದಲ್ಲ."** ಎಂದು ಸ್ಪಷ್ಟವಾಗಿ ನಿರ್ದೇಶನ ನೀಡಲಾಗಿದ್ದರೂ ಸಹ ಇತ್ತೀಚಿನ ದಿನಗಳಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳಲ್ಲಿ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರು ಭಾಗವಹಿಸುತ್ತಿರುವುದನ್ನು ಗಮನಿಸಲಾಗಿದೆ.

ಆದ್ದರಿಂದ ರಾಜ್ಯದ ಸರ್ಕಾರಿ ಅಧಿಕಾರಿ ಮತ್ತು ನೌಕರರು ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಿ ಹಾಗೂ ಇದನ್ನು ಉಲ್ಲಂಘಿಸುವ ಅಧಿಕಾರಿ ನೌಕರರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದೆಂದು ತಿಳಿಸುವ ಸುತ್ತೋಲೆಯನ್ನು ಹೊರಡಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

ಗೌರವಗಳೊಂದಿಗೆ,

(ಪ್ರಿಯಾಂಕ್ ಖರ್ಗೆ)

ಶ್ರೀ ಸಿದ್ದರಾಮಯ್ಯ ರವರು,
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ
ವಿಧಾನಸೌಧ
ಬೆಂಗಳೂರು.

ಯಾವುದೇ ಸರ್ಕಾರಿ ನೌಕರರು, ಯಾವುದೇ ರಾಜಕೀಯ ಪಕ್ಷದ ಅಥವಾ ರಾಜಕಾರಣದಲ್ಲಿ ಭಾಗವಹಿಸುವಂತಹ ಯಾವುದೇ ಸಂಘಸಂಸ್ಥೆಯ ಸದಸ್ಯರಾಗುವಂತಹದ್ದಲ್ಲ ಅಥವಾ ಅವುಗಳೊಂದಿಗೆ ಅನ್ಯಥಾ ಸಂಬಂಧ ಹೊಂದಿರತಕ್ಕದ್ದಲ್ಲ, ಅಥವಾ ಯಾವುದೇ ರಾಜಕೀಯ ಚಳುವಳಿ ಚಟುವಟಿಕೆಗಳಲ್ಲಿ ಭಾಗವಹಿಸದ ತಕ್ಕದ್ದಲ್ಲ. ಅದರ ಸಹಾಯಾರ್ಥ ವಂತಿಕೆ ನೀಡತಕ್ಕದ್ದಲ್ಲ, ಅಥವಾ ಅದಕ್ಕೆ ಯಾವುದೇ ರೀತಿಯ ನೆರವು ನೀಡತಕ್ಕದ್ದಲ್ಲ ಎಂದು ಕರ್ನಾಟಕ ನಾಗರಿಕ ಸೇವಾ ನಿಯಮಗಳಲ್ಲಿ ಸ್ಪಷ್ಟವಾಗಿ ನಿರ್ದೇಶನ ನೀಡಲಾಗಿದೆ ಎಂದು ಪತ್ರದಲ್ಲಿ ಪ್ರಿಯಾಂಕ್ ಖರ್ಗೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ನಾಗರೀಕ ಸೇವಾ ನಿಯಮಗಳಲ್ಲಿ ಸ್ಪಷ್ಟವಾಗಿ ನಿರ್ದೇಶನ ನೀಡಲಾಗಿದ್ದರೂ ಸಹ ಇತ್ತೀಚಿನ ದಿನಗಳಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಾಗೂ ಇತರೆ ಸಂಘಸಂಸ್ಥೆಗಳು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳಲ್ಲಿ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರು ಪಾಲ್ಗೊಳ್ಳುತ್ತಿದ್ದಾರೆ ಎಂಬುದನ್ನು ಪತ್ರದ ಮೂಲಕ ಪ್ರಿಯಾಂಕ್, ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರಿ, ಅಧಿಕಾರಿ ಮತ್ತು ನೌಕರರು ಆರ್ ಎಸ್ ಎಸ್ ಹಾಗೂ ಇತರ ಸಂಘಸಂಸ್ಥೆಗಳು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಿ ಹಾಗೂ ಇದನ್ನು ಉಲ್ಲಂಘಿಸುವ ಸರ್ಕಾರಿ ಅಧಿಕಾರಿ ನೌಕರರು ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸುವ ಸುತ್ತೋಲೆಯನ್ನು ಹೊರಡಿಸಲು ಸೂಕ್ತ ನಿರ್ದೇಶನ ನೀಡುವಂತೆ ಪ್ರಿಯಾಂಕ್ ಖರ್ಗೆ ಪತ್ರದಲ್ಲಿ ಮನವಿ ಮಾಡಿದ್ದಾರೆ.ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ಶಾಲಾ-ಕಾಲೇಜು, ಸಾರ್ವಜನಿಕ ಸ್ಥಳ, ಧಾರ್ಮಿಕ ಸಂಸ್ಥೆಗೆ ಸೇರಿದ ಸ್ಥಳಗಳಲ್ಲಿ ಅವಕಾಶ ನೀಡಬಾರದು ಎಂದು ಪ್ರಿಯಾಂಕ ಖರ್ಗೆ ಬರೆದಿದ್ದ ಪತ್ರ ಸಾಕಷ್ಟು ಗದ್ದಲಕ್ಕೆ ಕಾರಣವಾಗಿತ್ತು.

ಜತೆಗೆ ಬಿಜೆಪಿ ಹಾಗೂ ಕಾಂಗ್ರೆಸ್ ಮುಖಂಡರ ನಡುವೆ ವಾಗ್ವಾದಕ್ಕೂ ಈ ಪತ್ರ ಎಡೆ ಮಾಡಿಕೊಟ್ಟಿತ್ತಲ್ಲದೆ ಆರ್‌ಎಸ್‌ಎಸ್ ಜತೆ ಗುರುತಿಸಿಕೊಂಡಿರುವವರು ಪ್ರಿಯಾಂಕ ವಿರುದ್ಧ ಕಿಡಿಕಾರಿ ದ್ದರು.ಇಷ್ಟೆಲ್ಲದರ ಮಧ್ಯೆಯೇ ಸಚಿವ ಪ್ರಿಯಾಂಕ ಖರ್ಗೆ ಸರ್ಕಾರಿ ನೌಕರರು, ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಇರುವ ನಿರ್ಬಂಧವನ್ನು ಕಟ್ಟುನಿಟ್ಟಾಗಿ ಜಾರಿ ಮಾಡುವಂತೆ ಪತ್ರ ಬರೆದಿರುವ ಸಚಿವ ಪ್ರಿಯಾಂಕ ಖರ್ಗೆ, ಸಂಘ ಪರಿವಾರದ ಬೆಂಬಲಿಗರ ಕೆಂಗಣ್ಣಿಗೆ ಮತ್ತೆ ಗುರಿಯಾಗಿದ್ದಾರೆ.

## ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ,ಸಾಮಾನ್ಯ ಸೌಲಭ್ಯ ಕೇಂದ್ರ ಲೋಕಾರ್ಪಣೆ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.16**–ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮದಲ್ಲಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ ಲೋಕಾರ್ಪಣೆ ಸಮಾರಂಭ ಗುರುವಾರ ನಡೆಯಿತು.



ಪೂರ್ವನಿಗದಿಯಂತೆ ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಬೆಳಗ್ಗೆ 11.35ರ ವೇಳೆಗೆ ಸಿಂಧನೂರ ಮಾರ್ಗವಾಗಿ ಜವಳಗೇರಾ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ದೇಶಿ ಶೈಲಿಯ ಮಹಿಳಾ ಡೊಳ್ಳಿನ ತಂಡದವರಿಂದ ಹಾಗೂ ಪುಷ್ಪಾರ್ಪಣೆಯ ಮೂಲಕ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಮೊದಲಿಗೆ ಸಚಿವರು, ಅಂದಾಜು 2.54 ಕೋಟಿ ರೂ ವೆಚ್ಚದಲ್ಲಿ, ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ ನಬಾರ್ಡ ಸಂಯುಕ್ತವಾಗಿ ರೂಪಿಸಿರುವ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವಾದ ಕಲ್ಯಾಣ ಸಂಪದ ಕೇಂದ್ರವನ್ನು ರಿಬ್ಬನ್ ಕತ್ತರಿಸುವ ಮೂಲಕ ಲೋಕಾರ್ಪಣೆ ಮಾಡಿದರು.

ಇದೆ ವೇಳೆ ಸಚಿವರು, ಕಲ್ಯಾಣ ಸಂಪದ ಕಟ್ಟಡದಲ್ಲಿನ ಕಂಪನ ಜರಡಿ ಯಂತ್ರ, ಜಿಲ್ಲಾ ಮಿಶ್ರಣ ಸಂಗ್ರಹಗಾರ, ಜಿಲ್ಲಾ ಮಿಶ್ರಣ ಯಂತ್ರ, ಶುದ್ಧೀಕರಣ ಮತ್ತು ಗ್ರೈಂಡಿಂಗ್ ಯಂತ್ರ, ಬಣ್ಣ ಆಧಾರಿತ ಬೇರ್ಪಡಿಸುವ ಯಂತ್ರ, ಬೇಳೆ ಪ್ಯಾಂಕಿಂಗ್ ಯಂತ್ರ, ತಯಾರಾದ ವಸ್ತುಗಳ ಸಂಗ್ರಹಗಾರದ ವೀಕ್ಷಣೆ ನಡೆಸಿದರು. ಬಳಿಕ ವೇದಿಕೆಯ ಕಾರ್ಯಕ್ರಮ ನಡೆಯಿತು.

ಈ ವೇಳೆ ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಹಣಕಾಸು ಸೇವೆಗಳ ಇಲಾಖೆಯ ಕಾರ್ಯದರ್ಶಿ ಎಂ ನಾಗರಾಜ್, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ನಬಾರ್ಡ ಅಧ್ಯಕ್ಷರಾದ ಶಾಜಿ ಕೆ.ವಿ., ಜಿಲ್ಲಾಧಿಕಾರಿ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಮುಖಂಡರಾದ ವೆಂಕಟರಾವ್ ನಾಡಗೌಡ, ಕೆ.ವಿರುಪಾಕ್ಷಪ್ಪ, ಜವಳಗೇರಾ ಗ್ರಾಪಂ ಅಧ್ಯಕ್ಷರಾದ ನಾಗಲಿಂಗ ಯಮನೂರಪ್ಪ ಹಾಗೂ ಇತರರು ಇದ್ದರು.

## ಕಳಪೆ ಭತ್ತದ ಬೀಜದಿಂದ ನಷ್ಟ ಅನುಭವಿಸಿದ ರೈತರಿಗೆ ಪರಿಹಾರ ನೀಡಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.16**–ಪಟ್ಟಣದ ಕೃಷಿ ಇಲಾಖೆ ಅವರಣದಲ್ಲಿ ಜನಸೇವಾ ಫೌಂಡೇಷನ್ ವತಿಯಿಂದ ತಾ.ಕೃಷಿ ಸಹಾಯಕ ಕೃಷಿ ನಿರ್ದೇಶಕರಿಗೆ ಕೃಷಿ ಅಧಿಕಾರಿ ವೆಂಕಣ್ಣ ಯಾದವ್ ರವರ ಮೂಲಕ ಮನವಿ ಸಲ್ಲಿಸಿ ಜನಸೇವಾ ಫೌಂಡೇಷನ್ ತಾ.ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಮಾತನಾಡಿ, ತಾಲೂಕಿನ ವಿವಿಧ ಅಂಗಡಿಗಳಲ್ಲಿ ರೈತರು ಭತ್ತದ ಬೀಜ ಖರೀದಿ ಮಾಡಿದ್ದು ಅದರಲ್ಲಿ ಬಿ.ಪಿ.2 ತಳಿಯ ಭತ್ತದ ಬೀಜಗಳನ್ನು ಬಿತ್ತನೆ ಮಾಡಿದ ರೈತರ ಬೆಳೆಗಳು ಸಮರ್ಪಕವಾಗಿ ಬೆಳೆಯದೆ ಇರುವುದಕ್ಕೆ ಬೀಜ ಕಳಪೆಯಾಗಿರುವುದೆ ಕಾರಣವಾಗಿರುವುದರಿಂದ ಕೃಷಿ ಇಲಾಖೆಯಿಂದ ರೈತರ ಜಮೀನುಗಳಿಗೆ ಭೇಟಿ ನೀಡಿ ಭತ್ತದ ಬೆಳೆಯನ್ನು ಪರಿಶೀಲಿಸಿ ರೈತರಿಗೆ ಕಳಪೆ ಭತ್ತದ ಬೀಜವನ್ನು ಮಾರಟ ಮಾಡಿದ



ಅಂಗಡಿ ಮಾಲಿಕರು ಹಾಗೂ ಬಿ.ಪಿ.2 ತಳಿಯ ಭತ್ತದ ಬೀಜವನ್ನು ಉತ್ಪದನೆ ಮಾಡಿದ ಆಂಧ್ರ ಪ್ರದೇಶ ಮೂಲದ ನೀಲಕಂಠೇಶ್ವರ ಸೀಡ್ಸ ಕಂಪನಿಯ ಮೇಲೆ ಸೂಕ್ತವಾದ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಭತ್ತ ಬೆಳೆದು ನಷ್ಟವಾಗಿರುವ ರೈತರಿಗೆ ಸೂಕ್ತವಾದ ಪರಿಹಾರವನ್ನು ಕೊಡಿಸಬೇಕು ಎಂದು ಒತ್ತಾಯಿಸಿದರು.

ತಾ.ಪ್ರ.ಕಾರ್ಯದರ್ಶಿ ಹಸನ್ ಚೀಕಲಪರ್ವಿ, ಮೌಲ,ಅಜೀತ್,ಗೋಕುಲ್, ಸಿದ್ದರೆಡ್ಡಿ, ಚಂದ್ರಪ್ಪ, ಖಾಜಾಸಾಬ್, ಹನುಮೇಶ, ತಾಜುದ್ದೀನ್,ರಸೂಲ್, ಫಕ್ರುದ್ದೀನ್, ಹಾಜಿ, ಬಿ.ನಾರಾಯಣಪ್ಪ,ಮೌಲಸಾಬ್, ಗನಿ,ಮೌಲಸಾಬ್,ಮಾಮುನಿ,ಶರಣಪ್ಪ, ಇಮನವೇಲ್ ಸೇರಿದಂತೆ ಇನ್ನಿತರರು ಇದ್ದರು.

## ಖಾವಿ ಹಾಕಿಕೊಂಡು ಕೆಳ ಮಟ್ಟದ ಪದಗಳ ಬಳಕೆ ಖಂಡನೀಯ; ಕೆ.ಶಾಂತಪ್ಪ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.16**–ಮಹಾರಾಷ್ಟ್ರದ ಕೋಲಪುರ್ ಜಿಲ್ಲೆಯ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಹಾಕಿಕೊಂಡು ತಳಮಟ್ಟದ ಮಾತುಗಳನ್ನಾಡಿದ್ದು ಖಂಡನೀಯವೆಂದು ಹಿಂದುಳಿದ ವರ್ಗಗಳ ಒಕ್ಕೂಟದ ಅಧ್ಯಕ್ಷರಾದ ಕೆ. ಶಾಂತಪ್ಪ ತಿಳಿಸಿದರು. ಅವರು ಗುರುವಾರ ನಗರದ ಪತ್ರಿಕ ಭವನದಲ್ಲಿ ದು. ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಕರ್ನಾಟಕದಲ್ಲಿ ಲಿಂಗಾಯತ ಮಾಠಾಧೀಷರ ಒಕ್ಕೂಟದಿಂದ ಸಪ್ಟೆಂಬರ್ 1 ರಿಂದ 30 ರ ವರೆಗೆ ಬಸವ ಸಂಸ್ಕೃತಿ ಅಭಿಯಾನವು ನದ ಯಶಸ್ವಿಯಾಗಿ ನಡೆದು, ಅಕ್ಟೋಬರ್ 5 ರಂದು ಬೆಂಗಳೂರಿನಲ್ಲಿ ಸಮಾರೋಪಗೊಂಡಿದ್ದು ಈ ಅಭಿಯಾನದ ಮೂಲ ಉದ್ದೇಶ ಬಸವ ತತ್ವಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವದಾಗಿತ್ತು. ಈ ಅಭಿಯಾನಕ್ಕೆ ಕರ್ನಾಟಕದಾದ್ಯಂತ ಜನರಿಂದ ಅಭೂತ ಪೂರ್ವ ಬೆಂಬಲ ವ್ಯಕ್ತವಾಯಿತು. ಅಕ್ಟೋಬರ್ 5 ರ ರ್ ಯಶಸ್ವಿ ಸಮಾರೋಪ ಕಾರ್ಯಕ್ರಮವು, ಬಸವ ತತ್ವದಲ್ಲಿ ಕರ್ನಾಟಕದ ಜನಮಾನಸ ಇಟ್ಟಿರುವ ಪ್ರೇಮವನ್ನು ಪ್ರತಿಬಿಂಬಿಸಿತು.

ಇದನ್ನು ಸಹಿಸದ ಮನುವಾದಿ ಮನೋಸ್ಥಿತಿಯ ಮಹಾರಾಷ್ಟ್ರದ ಕೋಲಪುರ ಜಿಲ್ಲೆಯ ಆದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಯವರು, ದಿನಾಂಕ 09.10.2025 ರಂದು ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ, ಜತ್ತ ತಾಲ್ಲೂಕಿನ ಬೀಳೂರು ವಿರಕ್ತ ಮಠದ ಕಾರ್ಯಕ್ರಮ ದಲ್ಲಿ ಭಾಗವಹಿಸಿ, ಲಿಂಗಾಯತ ಮಾಠಾಧೀಷರನ್ನು ಅವರೇನೋ ಮಾಡಬಾರದ್ದನ್ನು ಮಾಡಿದ್ದಾರೆ ಎನ್ನುವ ರೀತಿಯಲ್ಲಿ ಸಾಮಾನ್ಯರು ಬಳಸಬಾರದ ಕೆಟ್ಟ ಪದಗಳಿಂದ ನಿಂದಿಸಿ ಮಾತನಾಡಿದ್ದಾರೆ. ಮುಂದುವರೆದು ಅವರನ್ನು



ಪಾದರಕ್ಷೆಯಿಂದ ಹೊಡೆಯಬೇಕು ಎಂದು ಹೇಳಿ ಇಡೀ ಲಿಂಗಾಯತ ಧರ್ಮದ ಗುರುವರ್ಗಕ್ಕೆ ಅವಮಾನ ಮಾಡಿದ್ದು, ಬಸವ ಭಕ್ತರ ಮನಸ್ಸಿ ಗೆ ನೋವನ್ನುಂಟು ಮಾಡಿದೆ. ಹಿಂದೆಯೋ ಈ ಸ್ವಾಮಿಗಳು ಬಸವ ಭಕ್ತರನ್ನು ಬಸವ ತಾಲಿಬಾನಗಳು ಎಂದು ಕರೆದು ವಿವಾದ ಮಾಡಿಕೊಂಡು ಬಸವ ಭಕ್ತರ ಕೆಂಗಣ್ಣಿಗೆ ಗುರಿ ಆಗಿದ್ದರು. ಕಂನ್ನೆರಿ ಕಾಡಸಿದ್ದೇಶ್ವರ ಸ್ವಾಮಿಗಳ ಈ ವರ್ತನೆ ಸರಿಯಲ್ಲವೆಂದು ತಿಳಿಸಿದರು.

ನಂತರ ಬಸವ ಕೇಂದ್ರದ ಗೌರವಾಧ್ಯಕ್ಷರಾದ ಅರವಿ ನಾಗನಗೌಡ ಮಾತನಾಡಿ,ಅವರು ಕೂಡಲೇ ಲಿಂಗಾಯತ ಮಾಠಾಧೀಷರ ಮತ್ತು ಬಸವ ಭಕ್ತರ ಕ್ಷಮೆಯನ್ನು ಕೇಳಬೇಕೆಂದು ಒತ್ತಾಯಿಸುತ್ತೇವೆ. ಒಂದು ವೇಳೆ ಅವರು ಕ್ಷಮೆ ಕೇಳದಿದ್ದರೆ ಕರ್ನಾಟಕದಲ್ಲಿ ಅವರ ಕಾರ್ಯಕಗಳನ್ನು ಬಹಿಷ್ಕರಿಸಿ ಪ್ರತಿಭಟನೆ ಮಾಡಲಾಗುವದು. ಅವರನ್ನು ಕರ್ನಾಟಕಕ್ಕೆ ಬರದಂತೆ ನಿಷೇಧ ಹೇರಬೇಕೆಂದು ಮುಖ್ಯಮಂತ್ರಿಗಳಿಗೆ ಮನವಿ ಮಾಡಿಕೊಳ್ಳಲಾಗುವದು ಎಂದು ತಿಳಿಸಿದರು.(2ನೇಪುಟಕ್ಕೆ)

## ಟೆಂಡರ್ ಅಕ್ರಮ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.16**–ರಾಯಚೂರು ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ರೂಪಾಂತರಗೊಂಡ ನಂತರ ದಿನಾಂಕ 04-12-2024 0 ಅಂತಿಮ ಅಧಿಸೂಚನೆ ಹೊರಡಿಸಿ 344 ಹುದ್ದೆಗಳನ್ನು ಸೃಜಿಸಿತ್ತು. ಇದರ ಪೈಕಿ 191 ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಅವಕಾಶ ನೀಡಲಾಗಿತ್ತು. ದಿನಾಂಕ 03-04-2025 ರಂದು 136 ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಯನ್ನು ಪಡೆಯಲು ಆಡಳಿತಾತ್ಮಕ ಅನುಮೋದನೆ ನೀಡಿದ್ದರು.ಆದರೆ ಮಹಾನಗರ ಪಾಲಿಕೆಯ ಆಯುಕ್ತರು 17-06-2025 ರಂದು ಟೆಂಡರ್ ಪ್ರಕಟಣೆ ನೀಡಿದರೂ, ಅದನ್ನು ಅಂತಿಮಗೊಳಿಸುವಲ್ಲಿ ವಿಫಲರಾಗಿದ್ದಾರೆ. ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿದ್ದು, ಕೆಟಿಪಿಪಿ ಕಾಯ್ದೆ ಹಾಗೂ ಆರ್ಥಿಕ ಇಲಾಖೆಯ ಸುತ್ತೋಲೆಗಳನ್ನು ಉಲ್ಲಂಘಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ವೇದಿಕೆ (ರಿ.) ರಾಯಚೂರು ಘಟಕದ ಸದಸ್ಯರು ಆರೋಪಿಸಿದ್ದಾರೆ.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವೇದಿಕೆಯ ಸದಸ್ಯ ರಾಜು ಪಟ್ಟಿ ಅವರು, ಟೆಂಡರ್ ಪ್ರಕ್ರಿಯೆಯಲ್ಲಿ ಕಪ್ಪುಪಟ್ಟಿಗೆ ಸೇರಿಸಿರುವ ಮೇ. ಶಾರ್ಪ್ ವಾಚ್ ಇನ್ವೆಸ್ಟಿಗೇಷನ್ ಸೆಕ್ಯೂರಿಟಿ ಸರ್ವಿಸ್ ಪ್ರೈವೇಟ್ ಲಿಮಿಟೆಡ್ ಮೈಸೂರು ಸಂಸ್ಥೆಗೆ ಗುತ್ತಿಗೆ ನೀಡಿರುವುದು ನಿಯಮಬಾಹಿರ ಕ್ರಮವಾಗಿದೆ ಎಂದು ಹೇಳಿದರು. ಈ



ಸಂಸ್ಥೆಯನ್ನು ಕಂದಾಯ ಇಲಾಖೆಯ ವಿಶೇಷ ಅಧಿಕಾರಿ ಮತ್ತು ಸಕ್ರಮ ಪ್ರಾಧಿಕಾರರು 08-05-2025 ರಂದು ಮೂರು ವರ್ಷಗಳವರೆಗೆ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪು ಪಟ್ಟಿಗೆ ಸೇರಿಸಿದ್ದಾರೆ. ಆದರೂ ಅಧಿಕಾರಿಗಳು ಇದೇ ಸಂಸ್ಥೆಗೆ ಗುತ್ತಿಗೆ ಒಪ್ಪಂದದ ಪತ್ರ ನೀಡಿರುವುದು ಗಂಭೀರ ಉಲ್ಲಂಘನೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ರಾಜು ಪಟ್ಟಿ ಅವರು ಮುಂದುವರೆದು, ಟೆಂಡರ್ ಪ್ರಕ್ರಿಯೆ ಕೆಟಿಪಿಪಿ ಕಾಯ್ದೆ 2000 ಹಾಗೂ ಸರ್ಕಾರದ ಆರ್ಥಿಕ ಇಲಾಖೆಯ ದಿನಾಂಕ 29-11-2021ರ ಸುತ್ತೋಲೆಯ ನಿಯಮಗಳನ್ನು ಉಲ್ಲಂಘಿಸಿದೆ ಎಂದು ಹೇಳಿದರು. ಟೆಂಡರ್ ಅಂತಿಮಗೊಳಿಸಬೇಕಾದ 90 ದಿನಗಳ ಅವಧಿ ಮೀರಿದ್ದು, 20 ದಿನಗಳಲ್ಲಿ ಗುತ್ತಿಗೆ ಒಪ್ಪಂದ ಕಾರ್ಯಗತಗೊಳಿಸಬೇಕಾದ ನಿಯಮ ಪಾಲನೆಯಾಗಿಲ್ಲ. ಅಧಿಕಾರಿಗಳ ಕೈ ಚಳಕ ಮತ್ತು ಭ್ರಷ್ಟಾಚಾರದ(2ನೇಪುಟಕ್ಕೆ...)

## ಕನ್ನಡ ಪುಸ್ತಕ ಓದುವ ಅಭಿರುಚಿ ಬೆಳಸಿಕೊಳ್ಳಿ: ಭೂಪನಗೌಡ ಪಾಟೀಲ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಅ.16**–ಯುವಕರು ಮೊಬೈಲ್ ಫೋನ್ ಗೀಳಿನಿಂದ ಹೊರಬಂದು, ಕನ್ನಡ ಪುಸ್ತಕ ಓದುವ ಅಭಿರುಚಿ ಬೆಳಸಿಕೊಳ್ಳಿ ಎಂದು ನಗರ ಯೋಜನ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್ಲ ಕರೆ ನೀಡಿದರು.



ಗುರುವಾರ ಲಿಂಗಸುಗೂರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲ್ಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಪದಗ್ರಹಣ ಹಾಗೂ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದು ಯುವ ಜನತೆ ಯಾವ ದಿಕ್ಕಿನಲ್ಲಿ ಸಾಗುತ್ತಿದೆ, ಬದುಕಿನ ಅರ್ಥ ಗೊತ್ತಿರದೇ ಜೀವನ ಮೌಲ್ಯಗಳನ್ನು ಗಾಳಿಗೆ ತೂರಿ ಮೊಬೈಲ್ ಗೀಳಿಗೆ ಜೋತು ಬಿದ್ದು ಜೀವನ ಜಡವಾಗುವಂತೆ ಮಾಡಿಕೊಂಡಿದ್ದಾರೆ. ಇಂತಹ ಜೀವ ಹಾನಿಕಾರಕ ಕೆಟ್ಟ ಹವ್ಯಾಸದಿಂದ ದೂರಸರಿದು ಬದುಕಿನ ಮೌಲ್ಯ ಕಂಡಕೊಳ್ಳಲು ಕನ್ನಡ ಸಾಹಿತ್ಯ ಪುಸ್ತಕಗಳನ್ನು ನಿರಂತರ ಓದಬೇಕೆಂದರು. ತಾಲ್ಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಮೊದಲಿನಿಂದಲೂ ಚಟುವಟಿಕೆಯಿಂದ ಕೂಡಿದ್ದು, ಇದುವರೆಗೂ ತಾಲ್ಲೂಕಿನಲ್ಲಿ ಎರಡು ಜಿಲ್ಲಾ ಸಮ್ಮೇಳನ ಮೂರು ತಾಲ್ಲೂಕು ಸಮ್ಮೇಳನ ಆಯೋಜಿಸಿ ಸಾಹಿತ್ಯ ಸಾಂಸ್ಕೃತಿಕ ವಿಚಾರಗಳನ್ನು ಪಸರಿಸಿದೆ. ತಾಲ್ಲೂಕು ಸಮ್ಮೇಳನ ಆಯೋಜಿಸುವುದಾದರೆ ಎಲ್ಲಾ ರೀತಿ ಯಿಂದ ಸಹಾಯ ಸಹಕಾರ ನೀಡಲಾಗುವುದೆಂದು ಅಭಯ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಪಾಮಯ್ಯ ಮುರಾರಿ, ಮುಖಂಡ ಬಸವರಾಜಗೌಡ ಗಣೇಕಲ್ ಮಾತನಾಡಿದರು.

ನಿಕಟಪೂರ್ವ ತಾಲ್ಲೂಕಾ ಅಧ್ಯಕ್ಷ ಮಲ್ಲಿಕಾರ್ಜುನ ಗೌಡರ ನೂತನ ಅಧ್ಯಕ್ಷ ಡಾ. ಮಹಾದೇವಪ್ಪ ನಾಗರಾಳ(2ನೇಪುಟಕ್ಕೆ..)

ಮೊದಲನೇಯ ಪುಟದಿಂದ

# ಟೆಂಡರ್ ಅಕ್ರಮ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

ಲಕ್ಷಣಗಳು ಸ್ಪಷ್ಟವಾಗಿ ಗೋಚರಿಸುತ್ತಿವೆ ಎಂದು ಆರೋಪಿಸಿದರು.

136 ಹುದ್ದೆಗಳಿಗೆ ಮಹಾನಗರ ಪಾಲಿಕೆಯಿಂದ ಅರ್ಜಿಗಳನ್ನು ಆಹ್ವಾನಿಸಿ ಪರೀಕ್ಷೆ ನಡೆಸಲಾಗಿದೆ. ಆದರೆ ಫಲಿತಾಂಶವನ್ನು ಇಂದಿಗೂ ಪ್ರಕಟಿಸಲಾಗಿಲ್ಲ. ಸರ್ಕಾರದ 20–05–2024ರ ಸುತ್ತೋಲೆಯಂತೆ ಹೊರಗುತ್ತಿಗೆ ನೇಮಕಾತಿಯಲ್ಲಿ 50 ಶೇಕಡಾ ಮೀಸಲಾತಿ ಆದ್ದರಿಂದ ನೀಡಿರುವ ಅನ್ವಯವಾಗಬೇಕಾಗಿದೆ. ಕಪ್ಪುಪಟ್ಟಿಯ ಏಜೆನ್ಸಿ ಗೆ ಟೆಂಡರ್ ರದ್ದುಪಡಿಸಿ, ಪ್ರಾಮಾಣಿಕ ಏಜೆನ್ಸಿ ಗೆ ಹೊಸ ಟೆಂಡರ್ ಕರೆಯಬೇಕು ಎಂದು ಆಗ್ರಹಿಸಿದರು.

ಅವರು ಸರ್ಕಾರದ ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿಯವರಿಗೆ ದೂರು ಸಲ್ಲಿಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ತಕ್ಷಣದ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಬೇಡಿಕೆ ಇಟ್ಟರು. ಈ ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ವೇದಿಕೆ (ರಿ.) ರಾಯಚೂರು ಘಟಕದ ಅಧ್ಯಕ್ಷ ಈರಣ್ಣಗೌಡ ಸದಸ್ಯರಾದ ಮಹೇಶ್ ಕುಮಾರ, ಬಸವರಾಜ. ರಾಮರೆಡ್ಡಿ ಉಪಸ್ಥಿತರಿದ್ದರು.

# ಖಾವಿ ಹಾಕಿಕೊಂಡು ಕೆಳ ಮಟ್ಟದ ಪದಗಳ ಬಳಕೆ ಖಂಡನೀಯ; ಕೆ.ಶಾಂತಪ್ಪ

ಈಗಾಗಲೆ ವಿಜಯಪುರದ ಜಿಲ್ಲಾಧಿಕಾರಿಗಳು ಕಾಡಸಿದ್ದೇಶ್ವರ ಸ್ವಾಮೀಜಿಗಳ ಪ್ರದೇಶವನ್ನು ವಿಜಯಪುರ ಜಿಲ್ಲೆಗೆ ನಿಷೇಧಿಸಿ ಆದೇಶ ಹೊರಡಿಸಿರುತ್ತಾರೆ. ಕಾಡಸಿದ್ದೇಶ್ವರ ಮಠ ಬಸವ ಸಂಪ್ರದಾಯದ್ದು ಆದರೆ ಅದೇ ಮಠಾಧೀಶನಾಗಿ ಬಸವ ತತ್ವಗಳನ್ನು ಆಳವಡಿಸಿಕೊಂಡಿರುವವರ ಹಾಗೂ ಅವರನ್ನು ಆರಾಧಿಸುವಂಥವರನ್ನು ಅವಚ್ಚ ಶಬ್ದಗಳಿಂದ ಬಯ್ಯುವುದು ಅವರ ಸ್ಥಾನಕ್ಕೆ ಅವರೇ ಅವಮಾನ ಮಾಡಿಕೊಂಡಂತೆ, ಬಸವ ಅಭಿಯಾನ ಯಶಸ್ವಿ ಆಗಿದ್ದಕ್ಕೆ ಸಂಕಟ ಆಗಿದೆ ಅವರಿಗೆ ಮುಂದೆ ಅವರಿಗೆ ತಕ್ಕ ಪಾಠ ಕಲಿಸಬೇಕಾಗುತ್ತದೆ. ಇವರ ವಿರುದ್ಧ 18ಕ್ಕೆ ಸರಿಯಾದ ರೂಪರೇಶಗಳನ್ನು ರಚಿಸಿ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಲಾಗುವುದು ಎಂದು ಜಾಗತಿಕ ಲಿಂಗಾಯತ ಮಹಾಸಭಾ ರಾಯಚೂರಿನ ಜಿಲ್ಲಾಧ್ಯಕ್ಷರಾದ ಪಿ.ರುದ್ರಪ್ಪ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಜೆ.ಬಸವರಾಜ ಅಧ್ಯಕ್ಷರು ಜಾಗತಿಕ ಲಿಂಗಾಯತ ತಾಲೂಕು ಘಟಕ ರಾಯಚೂರು, ಚನ್ನಬಸವಣ್ಣ ಉಪಾಧ್ಯಕ್ಷರು ಬಸವ ಕೇಂದ್ರ ರಾಯಚೂರು ಉಪಸ್ಥಿತರಿದ್ದರು.

# ಕನ್ನಡ ಪುಸ್ತಕ ಓದುವ ಅಭಿರುಚಿ ಬೆಳಸಿಕೊಳ್ಳಿ: ಭೂಪನಗೌಡ ಪಾಟೀಲ

ಅವರಿಗೆ ಕನ್ನಡ ಧ್ವಜ ಹಸ್ತಾಂತರಿಸುವುದರೊಂದಗೆ ಅಧಿಕಾರ ಹಸ್ತಾಂತರಿಸಿದರು. ನಂತರ ನೂತನ ಪದಾಧಿಕಾರಿಗಳು ಅಧಿಕಾರ ಸ್ವೀಕರಿಸಿದರು.ಸಾಹಿತಿ ಡಾ. ಕೆ. ಶಶಿಕಾಂತ ಅವರು ಪ್ರಗತಿಪರ ಸಾಹಿತ್ಯ ಕುರಿತಾಗಿ ಉಪನ್ಯಾಸ ನೀಡಿದರು. ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಗುಂಡಪ್ಪ ನಾಯಕ ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ. ಜಿ. ಗುರಿಕಾರ ಹಿರಿಯ ನ್ಯಾಯವಾದಿ ಎಮ್ಎಸ್ ನಾಡಗೌಡ ಕರಾಸನೌ ಸಂಘದ ಅಧ್ಯಕ್ಷ ಹಾಜಿಬಾಬು ಕಲ್ಯಾಣಿ ಹಾಜಿಮಲಂಗಬಾಬಾ ಪ್ರಾಧ್ಯಾಪಕರಾದ ಡಾ. ಹನುಮಂತಪ್ಪ ಡಾ. ಸಂಗನಗೌಡ ಪಾಟೀಲ ಚುಸಾಪ ಅಧ್ಯಕ್ಷ ದುರ್ಗಾಸಿಂಗ್ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಹಂದ್ರಾಳ ಉಪಸ್ಥಿತರಿದ್ದರು.

# ಸಿಜೆಐಗೆ ಅಪಮಾನ ಖಂಡಿಸಿ ಪ್ರತಿಭಟನೆ



**ಹುಮನಾಬಾದ್ ,ಅ.16–**ಸುಪ್ರೀಂಕೋರ್ಟ್ ಮುಖ್ಯ ನ್ಯಾಯ ಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ಶೂ ಎಸೆದ ವಕೀಲ ಕಿಶೋರ ರಾಕೇಶ ವಿರುದ್ಧ ಪ್ರಕರಣ ದಾಖಲಿಸಿ ಕಠಿಣ ಶಿಕ್ಷೆ ವಿಧಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಸಮಿತಿ ಆಗ್ರಹಿಸಿದೆ.

ಪಟ್ಟಣದ ಅಂಬೇಡ್ಕರ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಸಂಘಟನೆಯಿಂದ ತಹಸೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಮೇಲಿನ ಸಿಜೆಐ ಗವಾಯಿ ದಾಳಿಯಲ್ಲಿ, ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಉನ್ನತ ಹುದ್ದೆಯ ಮೇಲೆ ಹಾಗೂ ನ್ಯಾಯಯುತ ಘನತೆ ಮತ್ತು ಆಡಳಿತ ಮೇಲಿನ ದಾಳಿಯಾಗಿದ್ದು, ಇಂತಹ ದಾರುಣ ಘಟನೆಯು ನ್ಯಾಯಾಂಗದ ಗೌರವ ಮತ್ತು ಮೌಲ್ಯಗಳಿಗೆ ಧಕ್ಕೆ ತರುತ್ತದೆ ಎಂದು ಉಲ್ಲೇಖಿಸಲಾಗಿದೆ. ಈ ಕೃತ್ಯ ಎಸೆಗಿರುವ ವ್ಯಕ್ತಿಯ ವಿರುದ್ದ ಕ್ರಮಕ್ಕೆ ಆಗ್ರಹಿಸಲಾಗಿದೆ.

ಸಂಘಟನೆಯ ತಾಲೂಕು ಸಂಚಾಲಕ ರಾಹುಲ ಉದ್ಬಾ, ಪ್ರಮುಖರಾದ ಬಾಬು ಟೈಗರ, ಅವಿನಾಶ ಗಾಯಕವಾಡ, ತುಕಾರಾಮ ನೀಲಕಂಠ ಶೆಟ್ಟಿ, ಮುಸ್ತಾಪೂರೆ, ವಿದ್ಯಾಸಾಗರ ಸಾಧನೂರ, ವಿನೋದ ಮೇಲಕೇರಿ, ಸುಧಾಕರ ಶಿಂದೆ, ಶ್ರೀನಿವಾಸ ಕಟ್ಟಿಮನಿ, ಸೇರಿದಂತೆ ಅನೇಕರು ಇದ್ದರು.

# ಪ್ರತಿಮನೆಯಲ್ಲೂ ದೇಶಿ ಉತ್ಪನ್ನ ಬಳಸಲುವೈ.ಎಂ. ಸತೀಶ್ ಕರೆ

**ಬಳ್ಳಾರಿ, ಅ.16–** ಪ್ರತಿ ಮನೆಯೂ ಸ್ವದೇಶಿ ವಸ್ತುಗಳ ಬಳಕೆ ಆಗಬೇಕು ಈ ನಿಟ್ಟಿನಲ್ಲಿ ಆತ್ಮ ನಿರ್ಭರ ಭಾರತ ಸಂಕಲ್ಪದ ಅಂಗವಾಗಿ ಸ್ವದೇಶಿ ಉತ್ಪನ್ನಗಳನ್ನು ಬಳಸಿ ಎಂಬ ಅಭಿಯಾನವನ್ನು ಸೆ. 25 ರಿಂದ ಡಿ. 25 ರವರೆಗೆ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ವೈ. ಎಂ. ಸತೀಶ್ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಇಂದು ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ. ಈಗಾಗಲೇ ಜಿಲ್ಲಾದ್ಯಂತ ಬಿಜೆಪಿ ಕಾರ್ಯಕರ್ತರು ಕಳೆದ ಒಂದು ತಿಂಗಳಿಂದ ಮನೆ ಮನೆಗೆ ಹೋಗಿ ಆತ್ಮ ನಿರ್ಭರ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.ಈ ಅಭಿಯಾನವು ಸೆ. 25 ರಂದು ( ಪಂಡಿತ ದೀನದಯಾಳ್ ಉಪಾಧ್ಯಾಯರ ಜನ್ಮದಿನ ) ಉದ್ಘಾಟನೆಯಾಗಿದ್ದು, ಡಿ.25 ರಂದು ( ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನ ) ಸಮಾರೋಪಗೊಳ್ಳಲಿದೆ ಎಂದು ಹೇಳಿದರು.




ಈ ಅಭಿಯಾನವು ಸಾಮಾನ್ಯ ನಾಗರಿಕರ ಪಾಲ್ಗೊಳ್ಳುವಿಕೆ ಬಗ್ಗೆ ಜನಜಾಗೃತಿ ಮೂಡಿಸಿ, ಪ್ರತಿಯೊಬ್ಬ ಭಾರತೀಯನಿಗೂ ಆತ್ಮನಿರ್ಭರ ಭಾರತ ಸಂದೇಶ ತಲುಪಿಸಲಿದೆ. ಆದ್ದರಿಂದ, ಬಳ್ಳಾರಿಯಲ್ಲಿ ಅ.25 ರಿಂದ ಮನೆ ಮನೆಗೆ ಸ್ಟಿಕರ್ ಅಂಟಿಸಲಾ ಗುವುದು. ಗೋಡೆ ಬರಹ ಹಾಗೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಪ್ರಬಂಧ, ಕ್ವಿಜ್ ಹಾಗೂ ಪ್ರಮುಖರ ಮೂಲಕ ಭಾಷಣ, ಸಹಿ ಸಂಗ್ರಹ ಅಭಿಯಾನ, ಬೀದಿ ನಾಟಕ, ಬ್ಯಾನರ್ ಹಾಗೂ ಹೋರ್ಡಿಂಗ್ಸ್ ಮುಖಾಂತರ ಪ್ರಚಾರ ಆಯೋಜಿಸಲಾಗುವುದು.

# ಕಿಕ್ಕರ್: ಆಳಂದ ಪಟ್ಟಣಕ್ಕೆ ಸಮರ್ಪಕ ನೀರು ಪೂರೈಸಲು ಆಗ್ರಹ



**ಆಳಂದ,ಅ.16–**ಅಮರ್ಜಾ ಆಣೆಕಟ್ಟಿನಲ್ಲಿ ಸಮರ್ಪಕ ನೀರು ಇದ್ದರೂ ಆಳಂದ ಪಟ್ಟಣಕ್ಕೆ ನೀರು ಪೂರೈಸುವಲ್ಲಿ ತಾಲೂಕು ಆಡಳಿತ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಮಾಜಿ ಶಾಸಕ ಸುಭಾಷ ಆರ್ ಗುತ್ತೇದಾರ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಸ್ತುತ ಆಳಂದ ಪಟ್ಟಣದಲ್ಲಿ 15 ದಿನಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದೆ. ಇದರಿಂದ ಸಾರ್ವಜನಿಕರಿಗೆ ತುಂಬಾ ಕಷ್ಟವಾಗುತ್ತಿದೆ. ಸಮರ್ಪಕ ನೀರು ಪೂರೈಕೆ ಇಲ್ಲದೇ ನಾಗರಿಕರು ಹಿಡಿಶಾಪ ಹಾಕುತ್ತಿದ್ದಾರೆ. ಸ್ಥಳೀಯ ಆಡಳಿತ ಕೂಡಲೇ ಎಚ್ಚೆತ್ತುಕೊಂಡು ವ್ಯವಸ್ಥಿತವಾಗಿ ನೀರು ಪೂರೈಕೆಗೆ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಈ ಹಿಂದೆ ಚುನಾವಣೆಯ ಪ್ರಚಾರದ ಸಂದರ್ಭದಲ್ಲಿ ಶಾಸಕ ಬಿ ಆರ್ ಪಾಟೀಲ ವಾರಕ್ಕೆ ಕನಿಷ್ಠ 2 ಬಾರಿಯಾದರೂ ನೀರು ಪೂರೈಸುವ ವಾಗ್ದಾನ ನೀಡಿದ್ದರು ಆದರೆ ಆ ಮಾತು ಈಗ ಅವರಿಗೆ ನೆನಪಿಸುವ ಅವಶ್ಯಕತೆ ಬಂದಿದೆ ಎಂದು ತಿಳಿಸಿದ್ದಾರೆ.

ಕುಡಿಯಲು, ಬಳಸಲು ನೀರಿಲ್ಲದೇ ಜನ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಇದರ ಅರಿವಿಲ್ಲದೇ ಶಾಸಕರು ಜನರ ಗಮನ ಬೇರೆಡೆ ಸೆಳೆಯಲು ಇಲ್ಲದ ಸಲ್ಲದ ವಿಚಾರಗಳನ್ನು ಪ್ರಸ್ತಾಪಿಸಿ ಕಾಲಹರಣ ಮಾಡುತ್ತಿದ್ದಾರೆ. ಕೂಡಲೇ ಜನರ ಆದ್ಯತೆಯ ವಿಷಯಗಳ ಮೇಲೆ ಗಮನಹರಿಸಿ ನೀರು ಪೂರೈಕೆಗೆ ತ್ವರಿತ ಕ್ರಮಕೈಗೊಳ್ಳಲಿ ಎಂದು ಆಗ್ರಹಿಸಿದ್ದಾರೆ.

# ಕಳಪೆ ಕಾಮಗಾರಿ ಕುಸಿದು ಬಿದ್ದ ಸೇತುವೆ: ಚಾಮನೂರ ಗ್ರಾಮಸ್ಥರ ಪ್ರತಿಭಟನೆ




**ಕಲಬುರಗಿ,ಅ.16–** ಕಳಪೆ ಕಾಮಗಾರಿ ಸೇತುವೆ ಕುಸಿತ ಕೆಎಂವಿ ಕಂಪನಿ ಕಪ್ಪು ಪಟ್ಟಿಗೆ ಸೇರಿಸಿಲು ಕಂಪನಿ ಪರ ನಿಂತಿರುವ ಭ್ರಷ್ಟ ಅದಿಕಾರಿಗಳ ವಜಾಗೋಳಿಸಿ ಸೆತುವೆ ಕೆಲಸ ಪ್ರಾರಂಬಿಸುವಂತೆ ಆಗ್ರಹಿಸಿ ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ಅಧ್ಯಕ್ಷ ಎಂ.ಎಸ್.ಪಾಟೀಲ ನರಿಬೋಳ ಮತ್ತು ಪಾಳಾದ ಗುರುಮೂರ್ತಿ ಶಿವಾಚಾರ್ಯರರ ನೆತೃತ್ವದಲ್ಲಿ ಚಾಮನೂರ ಗ್ರಾಮಸ್ಥರು ಪ್ರತಿಭಟನೆ ಕೈಗೊಂಡರು.

ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನಾ ಪ್ರದರ್ಶನ ಕೈಗೊಂಡ ಚಾಮನೂರ ಗ್ರಾಮಸ್ಥರು, ಕಳಪೆಕಾಮಗಾರಿಯ ಹಿನ್ನಲೆಯಲ್ಲಿ ಚಾಮನೂರ ನಿರ್ಮಾಣ ಹಂತದಲ್ಲಿದ್ದ ಸೇತುವೆ ಸಂಪೂರ್ಣ ಕುಸಿದಿದ್ದು, ಕಳಪೆಕಾಮಗಾರಿ ಗೈಗೊಂಡವರ ವಿರುದ್ಧ ಕ್ರಮ ಜರುಗಿಸುವಂತೆ ಒತ್ತಾಯಿಸಲಾಯಿತು.

ಜೇವರ್ಗಿ ತಾಲುಕಾ ನರಿಬೋಳ , ಚಿತಾಪೂರ ತಾಲುಕಾ ಚಾಮನೂರ ಸೆತುವೆ ಅದಿಕಾರಿಗಳ ನಿರ್ಲಕ್ಷದಿಂದಾಗಿ ಗುತ್ತಿಗೆದಾರ ಗುಣಮಟ್ಟದ ಕಾಮಗಾರಿನಿರ್ವಹಿಸದೆ ಇರುವ ಕಾರಣಕ್ಕೆ ಒಂದೇ ಮಳೆಗೆ ಸೇತುವೆ ಸಂಪೂರ್ಣ ಕಳಚಿ ಬಿದ್ದಿದೆ. ಜನಪ್ರತಿನಿದಿಗಳ ನಿರ್ಲಕ್ಷದಿಂದಾಗಿ ನರಿಬೋಳ ಚಾಮನೂರ ಸಂಪರ್ಕ ಸೆತುವೆ ನಿರುಪಾಲಾಗಿದ್ದು, ಸುತ್ತಮೂತ್ತಲಿನ ಹಲವಾರು ಗ್ರಾಮಗಳ ಜನರಿಗೆ ತೊಂದರೆ ಯಾಗುತ್ತಿದೆ.

ಕಳೆದ 2018ರಲ್ಲಿ 68 ಕೋಟಿ ರೂಪಾಯಿ ವೆಚ್ಚದಲ್ಲಿ ಭೀಮಾ ನದಿಗೆ ಸೆತುವೆ ನಿರ್ಮಾಣ ಕಾಮಗಾರಿ ಆರಂಭಿಸಲಾಗಿತ್ತು. ಮೂರು ವರ್ಷದಲ್ಲಿ ಸೆತುವೆ ಪೂರ್ಣಗಳಿಸುವ ಭರವಸೆ ನೀಡಿದ್ದ ಹೈದ್ರಾಬಾದ ಮೂಲದ ಕಂಪನಿ ಗುತ್ತಿಗೆಯನ್ನು ಪಡೆದು ಒಂದುವರೆ ವರ್ಷದಲ್ಲಿಯೆ ಶೇಕಡಾ 70 ರಷ್ಟು ಕಾಮಗಾರಿ ಮುಗಿಸಿತತು. ಕಾಮಗಾರಿ ಅರ್ಧಕ್ಕೆನಿಲ್ಲಿಸಿ 7 ವರ್ಷವಾದರ ಇನ್ನೂ ಪೂರ್ಣಗೊಂಡಿಲ್ಲ.

ಜೇವರ್ಗಿ ಶಾಸಕರು ಮತ್ತು ಕೆ ಕೆ ಆರ್ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್ ಬೆಂಗಳೂರಿಗೆ ಹೋರಾಟಗಾರರ ನಿಯೋಗ ಭೇಟಿ ಮಾಡಿ, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೋ ಳಿ ಅವರನ್ನು ಭೇಟಿ ಮಾಡಿಸಿ ಮಾಡಿಸಿ 14 ಕೋಟಿ ರೂ. ಅನುದಾನಕ್ಕೆ ಮನವಿ ಸಲ್ಲಿಸಿದಾಗ ಸಚಿವರು ಸ್ಪಂದಿಸಿ ಅನುದಾನ ಬಿಡಗಡ 'ಮಾಡುವ ಭರವಸೆ ನೀಡಿದ್ದರು.

ಕಳಪೆ ಗಾಮಗಾರಿಯ ಕುರಿತು ಸಮಗ್ರ ತನಿಖೆನಡೆಸಿ ಗುತಿಗೆದಾರ ವಿರುದ್ದ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಲಾಯಿತು. ಪ್ರತಿಭಟನೆಯಲ್ಲಿಉ ಶಂಕರಗೌಡ ಪಾಟೀಲ, ಸುಮಾ ಕವಲ್ದಾರ, ಅಶ್ವಿನಿ ಚವ್ಹಾಣ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

# ವಿಶ್ವಶಾಂತಿಯ ಅಗತ್ಯತೆ, ಸಂದೇಶ ಸಾರಿದ ಶಿಫಾ ಜಮಾದಾರಗೆ ಸನ್ಮಾನ

**ಹುಮನಾಬಾದ್ ,ಅ.16–** ರಷ್ಯಾ ರಾಜಧಾನಿ ಮಾಸ್ಕೋದಲ್ಲಿ ಎಂಟು ದಿನಗಳ ಕಾಲ ನಡೆದ ವಿಶ್ವ ಯುವ ಶೃಂಗ ಸಭೆಯಲ್ಲಿ ಭಾರತ ದೇಶದಿಂದ ಏಕೈಕ ಯುವ ಪ್ರತಿನಿಧಿಯಾಗಿ ಭಾಗವಹಿಸಿದ ಕುಮಾರಿ ಶಿಫಾ ಜಮಾದಾರ ವಿಶ್ವಶಾಂತಿಯ ಅಗತ್ಯತೆ, ಶಾಂತಿ ಸಂದೇಶ ಸಾರುವಲ್ಲಿ ಭಾರತದ ಪಾತ್ರ ಕುರಿತು ಮನಮುಟ್ಟುವಂತೆ ಮಾತನಾಡುವ ಮೂಲಕ ರಷ್ಯಾದಲ್ಲಿ ಶಾಂತಿ ಮಂತ್ರದ ಸಂದೇಶ ಸಾರಿದ್ದಾರೆ. ಈ ಸಮಾವೇಶದಲ್ಲಿ ವಿಶ್ವಶಾಂತಿ ಹಾಗೂ ವಿಶ್ವ ಶಾಂತಿ ಕಾಪಾಡುವಲ್ಲಿ ಯುವಜನತೆಯ ಪಾತ್ರ ಹಾಗೂ ವಿಶ್ವ ಶಾಂತಿ ಸ್ಥಾಪಿಸುವಲ್ಲಿ ಭಾರತದ ದಿವ್ಯ ಹೆಜ್ಜೆಗಳ ಕುರಿತು ಸುದೀರ್ಘವಾಗಿ ತಮ್ಮ ವಿಚಾರಗಳನ್ನು ಪ್ರಸ್ತುತಪಡಿಸಿರುವ ಪ್ರಯುಕ್ತ ಕಾಂಗ್ರೆಸ್ ಮುಖಂಡರಾದ ಸೈಯದ ತಾಹೇರ ಅಲಿ ನಂದಗಾಂವ್, ಪ್ರಮುಖರಾದ ಜಾವೇದ ಜಮಾದಾರ್, ಮೋಹಿದಿನ್ನ ಸೌಕಾರ, ಅಷ್ಫಾಕ ಮಾಸ್ಟರ್, ಅಹೆಮದ್ ಕಬಾಡಿ ಅವರು ಸನ್ಮಾನಿಸಿ, ಅಭಿನಂದಿಸಿದರು.

ರಷ್ಯಾ ಅಧ್ಯಕ್ಷ ವಾಡ್ಲಿಮೀರ್ ಪುಟೀನ್, ಮಯನ್ಮಾರ್ ರಾಷ್ಟ್ರಪತಿ, ಆರ್ಮೇನಿಯಾ ಪ್ರಧಾನಿ, ಇತೋಫಿಯಾ ಪ್ರಧಾನಮಂತ್ರಿ, ಬೇಲಾರೂಸ್ ಪ್ರಧಾನಿ, ಸೇರಿದಂತೆ ಅನೇಕ ರಾಷ್ಟ್ರಗಳ ಪ್ರಧಾನಮಂತ್ರಿಗಳು, ರಾಷ್ಟ್ರಾಧ್ಯಕ್ಷರು, ಉಜ್ಬೇಕಿಸ್ತಾನ್, ಅರಬ್ ಗಣರಾಜ್ಯ, ಇರಾನ್, ಈಜಿಪ್ತ ಹಾಗೂನೈಜಿರಿಯಾ ಸೇರಿದಂತೆ ವಿವಿಧ ದೇಶಗಳ ವಿದೇಶಾಂಗ ಸಚಿವರು, ರಾಯಭಾರಿಗಳು ಭಾಗವಹಿಸಿದ್ದ ಈ ಸಭೆಯಲ್ಲಿ ಶಿಫಾ ಸಮರ್ಥವಾಗಿ ವಿಶ್ವ ಶಾಂತಿ ಕುರಿತಾದ ತಮ್ಮ ವಿಚಾರಗಳನ್ನು ಪ್ರಸ್ತುತಪಡಿಸಿ ವಿಶ್ವ ಶಾಂತಿಯ ಅಗತ್ಯತೆ ಕುರಿತು ಮನವರಿಕೆ ಮಾಡಿಕೊಟ್ಟರು.

ಭಾರತೀಯ ಸಂಸ್ಕೃತಿ, ಸಹೋದರತೆಯ ಪ್ರತಿಬಿಂಬವಾಗಿರುವ 'ವಸುಧೈವ ಕುಟುಂಬಕಂ' (ಇಡೀ ಜಗತ್ತೇ ಒಂದು ಕುಟುಂಬ)



ಎಂಬ ನೆಲೆಗಟ್ಟಿನ ಆಧರಿಸಿ ಸಮರ್ಥವಾಗಿ ತಮ್ಮ ವಿಚಾರಗಳನ್ನು ಮಂಡಿಸಿ ಇಡಿ ವಿಶ್ವದ ಯುವ ನಾಯಕರ ಗಮನ ಸೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ.

ವಿಶ್ವ ಅಣು ದಿನಾಚರಣೆ ಅಂಗವಾಗಿ ರಷ್ಯಾ ಸರ್ಕಾರ ತನ್ನ ರಾಜಧಾನಿಯಲ್ಲಿ ಆಯೋಜಿಸಿದ್ದ ವಿಶ್ವ ಯುವ ಶೃಂಗ ಸಭೆಯಲ್ಲಿ ಇಂಗ್ಲೆಂಡ್, ಅಮೇರಿಕೆ, ಜರ್ಮನಿ, ಪ್ರಾನ್ಸ್ ಸೇರಿದಂತೆ ವಿವಿಧ ದೇಶಗಳಿಂದ ಸರಿಸುಮಾರು 160 ಕ್ಕೂ ಅಧಿಕ ದೇಶದ ಯುವ ಪ್ರತಿನಿಧಿಗಳು ಈ ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಭಾಗವಹಿಸಿದ್ದರು.

ಈ ಸಮಾವೇಶದಲ್ಲಿ ವಿಶ್ವಶಾಂತಿ ಹಾಗೂ ವಿಶ್ವ ಶಾಂತಿ ಕಾಪಾಡುವಲ್ಲಿ ಯುವಜನತೆಯ ಪಾತ್ರ ಹಾಗೂ ವಿಶ್ವ ಶಾಂತಿ ಸ್ಥಾಪಿಸುವಲ್ಲಿ ಭಾರತದ ದಿವ್ಯ ಹೆಜ್ಜೆಗಳ ಕುರಿತು ಸುದೀರ್ಘವಾಗಿ ತಮ್ಮ ವಿಚಾರಗಳನ್ನು ಪ್ರಸ್ತುತಪಡಿಸಿದರು.

# ಪ್ರಿಯಾಂಕ್‌ಗೆ ಬೆದರಿಕೆ ಕರೆ ಕಿಡಿಗೇಡಿ ಗುರುತು ಪತ್ತೆ

**ಬೆಂಗಳೂರು,ಅ.16–** ಆರ್‌ಎಸ್‌ಎಸ್ ಕುರಿತು ನೀಡಿದ ಹೇಳಿಕೆಗಳಿಗೆ ಸಂಬಂಧಿಸಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮೊಬೈಲ್ ಕರೆ ಮಾಡಿ ಬೆದರಿಕೆ ಹಾಕಿದ್ದ ಕಿಡಿಗೇಡಿಯ ಸುಳಿವು ಪತ್ತೆ ಹಚ್ಚಿರುವ ನಗರ ಪೊಲೀಸರು ಆತನ ಬಂಧನಕ್ಕೆ ಬಲೆ ಬೀಸಿದ್ದಾರೆ.

ಸಚಿವ ಖರ್ಗೆಗೆ ಕರೆ ಮಾಡಿದ ಕಿಡಿಗೇಡಿಯನ್ನು ಮಹಾರಾಷ್ಟ್ರದ ಸೋಲಾಪುರ ಮೂಲದ ದಾನೇಶ್ ನರೋಣ ಎಂದು ಗುರುತಿಸಲಾಗಿದ್ದು,ಆತನ ಬಂಧನಕ್ಕೆ ಪೊಲೀಸರು ತೆರಳಿದ್ದಾರೆ.

ಆರೋಪಿಯು ಪ್ರಿಯಾಂಕ್ ಖರ್ಗೆಗೆ ಕರೆ ಮಾಡಿ ಬೆದರಿಕೆ ಹಾಕಿದ್ದಲ್ಲದೇ ಅವಾಚ್ಯ ಪದಗಳಿಂದ ನಿಂದಿಸಿದ್ದ. ಇದನ್ನು ರೆಕಾರ್ಡ್ ಮಾಡಿಕೊಂಡಿದ್ದ ಸಚಿವರು, ಸೋಶಿಯಲ್ ಮೀಡಿಯಾ ಎಕ್ಸ್ ಖಾತೆಯಲ್ಲಿ ಬಹಿರಂಗಪಡಿಸಿದ್ದರು. ಆದರೆ ಈ ಕುರಿತು ಪೊಲೀಸ್ ದೂರು ನೀಡಿರಲಿಲ್ಲ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮುಖಂಡ ಮನೋಹರ್ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ದೂರಿನನ್ವಯ ಎಫ್‌ಐಆರ್ ದಾಖಲಿಸಿಕೊಂಡ ಪೊಲೀಸರು ತನಿಖೆಗಿ ಳಿದು ಆರೋಪಿಯ ಗುರುತು ಪತ್ತೆ ಹಚ್ಚಿದ್ದಾರೆ.



ಆರ್‌ಎಸ್‌ಎಸ್ ಅನ್ನು ನಿಷೇಧಿಸುವ ಕುರಿತು ಚಿಂತನೆ ಮಾಡುವಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಖರ್ಗೆ ಮನವಿ ಮಾಡಿದ್ದರು. ಆರ್‌ಎಸ್‌ಎಸ್‌ಗೆ 100 ವರ್ಷಗಳು ತುಂಬಿದ ಹಿನ್ನೆಲೆಯಲ್ಲಿ, ಈ ಬಗ್ಗೆ ಹೆಚ್ಚಿನ ಸಾರ್ವಜನಿಕ ಚರ್ಚೆ ನಡೆಯುತ್ತಿದೆ. ಖರ್ಗೆಗೆ ಬೆದರಿಕೆ ಕರೆ ಬಂದ ಹಿನ್ನೆಲೆಯಲ್ಲಿ ತನಿಖೆಗಾಗಿ ಗೃಹ ಸಚಿವ ಜಿ ಪರಮೇಶ್ವರ ಆದೇಶ ನೀಡಿದ್ದರು.

# ಭಾರತ ರಷ್ಯಾದಿಂದ ತೈಲ ಖರೀದಿ ನಿಲ್ಲಿಸಲಿದೆ: ಮೋದಿ ಭರವಸೆ: ಟ್ರಂಪ್



**ನವದೆಹಲಿ, ಅ. 16–** ರಷ್ಯಾದಿಂದ ತೈಲ ಖರೀದಿಯನ್ನು ಭಾರತ ನಿಲ್ಲಿಸಲಿದೆ. ಈ ಬಗ್ಗೆ ಭಾರತದ ಪ್ರಧಾನಿ ನಮಗೆ ಭರವಸೆ ನೀಡಿದ್ದಾರೆ ಎಂಬ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೆ ಪ್ರತಿಕ್ರಿಯಿಸಿರುವ ವಿದೇಶಾಂಗ ಸಚಿವಾಲಯ ಭಾರತದ ಆಮದು ನೀತಿಗಳು ಸಂಪೂರ್ಣವಾಗಿ ದೇಶದ ಹಾಗೂ ಗ್ರಾಹಕರ ಹಿತಾಸಕ್ತಿಗಳನ್ನು ರಕ್ಷಿಸುವ ಉದ್ದೇಶದಾಗಿರುತ್ತದೆ ಎಂದು ಸ್ಪಷ್ಟಪಡಿಸಿ, ಟ್ರಂಪ್ ಹೇಳಿಕೆಯನ್ನು ಪರೋಕ್ಷವಾಗಿ ತಳ್ಳಿ ಹಾಕಿದೆ.

ಅಸ್ಥಿರ ಇಂಧನ ಸನ್ನಿವೇಶದಲ್ಲಿ ಭಾರತೀಯ ಗ್ರಾಹಕರ ಹಿತಾಸಕ್ತಿಗಳನ್ನು ರಕ್ಷಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ ಮತ್ತು ದೇಶದ ಇಂಧನ ಆಮದುಗಳು ಸಂಪೂರ್ಣವಾಗಿ ಗ್ರಾಹಕರ ಹಿತಾಸಕ್ತಿಗಳನ್ನು ರಕ್ಷಿಸುವ ಉದ್ದೇಶದಿಂದ ಮಾರ್ಗದರ್ಶಿಸಲ್ಪಡುತ್ತವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಭಾರತ ರಷ್ಯಾದಿಂದ ತೈಲ ಖರೀದಿ ಮಾಡುತ್ತಿದ್ದುದು ನನಗೆ ಇಷ್ಟವಿರಲಿಲ್ಲ. ರಷ್ಯಾದ ತೈಲ ಖರೀದಿಯನ್ನು ಭಾರತ ನಿಲ್ಲಿಸುವುದಾಗಿ ಪ್ರಧಾನಿ ಮೋದಿ ಭರವಸೆ ನೀಡಿದ್ದಾರೆ. ತಕ್ಷಣಕ್ಕೆ ತೈಲ ಸರಬರಾಜು ಖರೀದಿ ನಿಲ್ಲಿಸಲು ಸಾಧ್ಯವಿಲ್ಲ. ಅದುವೊಂದು ಪ್ರಕ್ರಿಯೆ ಎಂದು ಅವರು ಹೇಳಿದ್ದಾರೆ ಎಂದು ಡೊನಾಲ್ಡ್ ಟ್ರಂಪ್ ನಿನ್ನೆ ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದ್ದರು.

ಡೊನಾಲ್ಡ್ ಟ್ರಂಪ್ ಅವರ ಈ ಹೇಳಿಕೆ ನಾನಾ ಚರ್ಚೆಗೆ ಎಡೆಮಾಡಿಕೊಟ್ಟ ಬೆನ್ನಲ್ಲೆ ವಿದೇಶಾಂಗ ಸಚಿವಾಲಯ ಈ ಬಗ್ಗೆ ಸ್ಪಷ್ಟನೆ ನೀಡಿ, ನಮ್ಮ ಇಂಧನ ಖರೀದಿ ಆಮದು ನೀತಿಗಳು ದೇಶದ ಗ್ರಾಹಕರ ಹಿತಾಸಕ್ತಿಗಳ ರಕ್ಷಿಸುವುದರತ್ತಷ್ಟೇ ಇರುತ್ತದೆ ಎಂದು ಹೇಳಿ, ಸ್ಥಿರ ಬೆಲೆಗಳು ಮತ್ತು ಸುರಕ್ಷಿತ ಸರಬರಾಜನ್ನು ಖಚಿತಪಡಿಸಿಕೊಳ್ಳುವುದು ನಮ್ಮ ಇಂಧನ ನೀತಿಯ ಉದ್ದೇಶವಾಗಿದೆ. ಇದರಲ್ಲಿ ಇಂಧನ ಮೂಲಗಳನ್ನು ವೈವಿಧ್ಯಮ ಯಗೊಳಿಸುವುದೂ ಸೇರಿದೆ ಎಂದು ವಿದೇಶಾಂಗ ಸಚಿವಾಲಯ ದ ವಕ್ತಾರ ರಣಬೀರ್ ಜೈಸ್ವಾಲ್ ಹೇಳಿದ್ದಾರೆ.

ಅಮೆರಿಕಾದೊಂದಿಗೂ ವ್ಯಾಪಾರ ಭಾರತ ಅಮೆರಿಕದೊಂದಿಗೂ ತೈಲ ವ್ಯಾಪಾರದ ಬಗ್ಗೆ ಚರ್ಚೆ ನಡೆಸುತ್ತಿದೆ. ಭಾರತವು ಅಮೆರಿಕಾದಿಂದ ಹೆಚ್ಚುವರಿ 15 ಬಿಲಿಯನ್ ಡಾಲರ್ ಮೌಲ್ಯದ ತೈಲವನ್ನು ಖರೀದಿಸುವ ಸಾಮರ್ಥ್ಯ ಹೊಂದಿದೆ. ಭಾರತ ಮತ್ತು ಅಮೆರಿಕಾ ನಡುವೆ ಕ್ಷಿಪ್ರವಾಗಿ ವ್ಯಾಪಾರ ಒಪ್ಪಂದ ಮಾಡಿಕೊಳ್ಳುವ ಬಗ್ಗೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಅಮೆರಿಕಾದಿಂದ ತೈಲ ಖರೀದಿ ಮಾಡಿದರೆ ಭಾರತಕ್ಕೆ 42.7 ಬಿಲಿಯನ್ ಡಾಲರ್ ವ್ಯಾಪಾರ ಉಳಿತಾಯವನ್ನು ಮಾಡಬಹುದಾಗಿದೆ ಎಂದು ವಿದೇಶಾಂಗ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಭಾರತವು ರಷ್ಯಾದಿಂದ ತೈಲ ಖರೀದಿ ನಿಲ್ಲಿಸಲಿದೆ ಎಂಬ ಟ್ರಂಪ್ ಹೇಳಿಕೆ ನಂತರ ಬೆಳಿಗ್ಗಿನಿಂದಲೇ ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಯಲ್ಲಿ ಕಚ್ಚಾತೈಲ ಬೆಲೆಗಳು ಸುಮಾರು ಶೇ. 1 ರಷ್ಟು ಏರಿಕೆಯಾಗಿದ್ದವು. ನಿನ್ನೆ ಟ್ರಂಪ್ ಭಾರತ ರಷ್ಯಾದಿಂದ ತೈಲ ಖರೀದಿ ನಿಲ್ಲಿಸುವ ಬದಲಾವಣೆ ತಕ್ಷಣ ನಡೆಯುವುದಿಲ್ಲ. ಆದರೆ ಮುಂದಿನ ದಿನಗಳಲ್ಲಿ ಆಗಲಿದೆ. ಚೀನಾವು ಇದೇ ಕೆಲಸ ಮಾಡಬೇಕು ಎಂದು ಒತ್ತಾಯಿಸಿದ್ದರು. ಇದು ಭಾರೀ ಚರ್ಚೆಗೆ ಎಡೆಮಾಡಿ ಕೊಟ್ಟಿತ್ತು.

# ಪ್ರಿಯಾಂಕ್‌ಗೆ ಬೆದರಿಕೆ ಪತ್ರ ಸುಳ್ಳು

**ಬೆಂಗಳೂರು,ಆ.16–** ರಾಜ್ಯದಲ್ಲಿ ಆರ್ ಎಸ್ ಎಸ್ ನಿಷೇಧದ ಕುರಿತು ಹೇಳಿಕೆ ನೀಡಿರುವ ಸಚಿವ ಪ್ರಿಯಾಂಕ ಖರ್ಗೆಗೆ ಬೆದರಿಕೆ ಕರೆ ಬರುತ್ತಿರುವುದು ಶುದ್ಧ ಸುಳ್ಳು ಎಂದು ವಿಧಾನ ಪರಿಷತ್ ಸದಸ್ಯ ಎಚ್, ವಿಶ್ವನಾಥ್ ಇಂದಿಲ್ಲಿ ವಾಗ್ದಾಳಿ ನಡೆಸಿದ್ಧಾರೆ

ರಾಜ್ಯದಲ್ಲಿ ಆರ್ ಎಸ್ ಎಸ್ ಚಟುವಟಿಕೆಗಳಿಗೆ ನಿಷೇಧ ಹೇರುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯಗೆ ಸಚಿವ ಪ್ರಿಯಾಂಕ ಖರ್ಗೆ ಪತ್ರ ಬರೆದಿದ್ದರು. ಈ ಹಿನ್ನೆಲೆಯಲ್ಲಿ ಬೆದರಿಕೆ ಕರೆ ಬರುತ್ತಿವೆ ಎಂದು ಸಚಿವ ಪ್ರಿಯಾಂಕ ಖರ್ಗೆ ಹೇಳಿಕಗೆ ಎಚ್. ವಿಶ್ವನಾಥ್ ತಿರುಗೇಟು ನೀಡಿದ್ದು ಯಾವುದೇ ಬೆದರಿಕೆ ಕರೆ ಬರುತ್ತಿಲ್ಲ ಎಂದಿದ್ಧಾರೆ

ಮೈಸೂರಿನಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಅವರು ನಿಮ್ಮಪ್ಪ ಮಲ್ಲಿಕಾರ್ಜುನ ಖರ್ಗೆ ಅವರಂತೆ ಒಳ್ಳೆಯ ಕೆಲಸ ಮಾಡು ಎಂದು ಜನ ಗೆಲ್ಲಿಸಿದ್ದಾರೆ. ಆದರೆ ನೀನು ಕೆಲಸಕ್ಕೆ ಬಾರದ ವಿಚಾರಗಳನ್ನು ಮಾತನಾಡಿಕೊಂಡು ರಾಷ್ಟ್ರೀಯ ನಾಯಕ ಎಂದು ಬಿಂಬಿಸಿಕೊಳ್ಳಲು ಹೊರಟಿದ್ದೀಯ ಎಂದು



ಹರಿಹಾಯ್ದಿದ್ದಾರೆ

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಗನಿಗೆ ಯಾರು ಬೆದರಿಕೆ ಹಾಕುತ್ತಾರೆ ಇದು ಬರಿ ಸುಳ್ಳಿನಿಂದ ಕೂಡಿದೆ. ನಾನು ಸಹ ಸಿದ್ದರಾಮಯ್ಯ ವಿರುದ್ಧ ಎಷ್ಟೋ ಬಾರಿ ಟೀಕೆ ಮಾಡಿದ್ದೇನೆ. ಆದರೆ ಇದುವರೆಗೂ ನನಗೆ ಕರೆ ಮಾಡಿ ಯಾರು ಬೆದರಿಕೆ ಹಾಕಿಲ್ಲ. ಪ್ರಶ್ನೆಯು ಮಾಡಿಲ್ಲ ಎಂದಿದ್ಧಾರೆ

# ರಾಜ್ಯದಲ್ಲಿ ಕುಡಿತ ಹೆಚ್ಚಿಸಲು ಬಾರ್ ಮಾಲೀಕರಿಗೆ ಟಾರ್ಗೆಟ್ ನೀಡಿದ ಅಬಕಾರಿ ಇಲಾಖೆ ..!

**ಬೆಂಗಳೂರು,ಅ.16–** ತೆರಿಗೆ ಏರಿಸಿ ಮದ್ಯ ಪ್ರಿಯರ ಕೆಂಗಣ್ಣಿಗೆ ಗುರಿಯಾಗಿದ್ದ ಅಬಕಾರಿ ಇಲಾಖೆ ಈಗ ಮತ್ತೊಂದು ನಾಟಕ ಶುರುಮಾಡಿದೆ ! ಆದಾಯ ಹೆಚ್ಚಳ ಮಾಡಿ ಕೊಳ್ಳಲು ಹೆಚ್ಚು ಮದ್ಯ ಕುಡಿಸಿ ಎಂದು ಬಾರ್‌ನವರಿಗೆ ಟಾರ್ಗೆಟ್ ಫಿಕ್ಸ್ ಮಾಡಲು ಮುಂದಾಗಿ ಹೊಸ ವಿವಾದ ಮೈಮೇಲೆ ಎಳೆದುಕೊಂಡಿದೆ.

ಕೇಂದ್ರಸರ್ಕಾರ ಜಿಎಸ್‌ಟಿ ಪರಿಷ್ಕರಣೆಯಿಂದ ಜನಸಾಮಾನ್ಯರಿಗೆ ಲಾಭ ನೀಡಿದರೆ ಇತ್ತ ನಷ್ಟವನ್ನು ಸರಿದೂಗಿಸಲು ಸರ್ಕಾರ ಈಗ ಅಬಕಾರಿ ಇಲಾಖೆಗೆ ಕಠಿಣ ಸೂಚನೆ ನೀಡಿದ್ದು ಇದರಿಂದ ಬಾರ್ ಮಾಲೀಕರಿಗೆ ಅಬಕಾರಿ ಸಿಬ್ಬಂದಿ ಮಾರಾಟ ಹೆಚ್ಚಳ ಮಾಡುವಂತೆ ಒತ್ತಡ ಹೇರುತ್ತಿದ್ದಾರೆ.

ಒಂದು ಲೀಟರ್ ಮದ್ಯ ಮಾರಾಟ ಮಾಡುವಲ್ಲಿ 10 ಲೀಟರ್ ಮಾರಾಟ ಮಾಡಿ ಎಂದು ಅಬಕಾರಿ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಬಾರ್ ಲೈಸೆನ್ಸ್ ಹೊಂದಿರುವವರಿಗೆ ಕಟ್ಟಪ್ಪಣೆ ಮಾಡಿದ್ದಾರೆ.

ಕುಡಿಯದೆ ಇರುವವರನ್ನು ನಾವು ಹೇಗೆ ಕರೆತಂದು ವ್ಯಾಪಾರ ಮಾಡುವುದು? ವರ್ಷದಿಂದ ವರ್ಷಕ್ಕೆ ಸೇಲ್ಸ್ 10 ಪಟ್ಟು ಹೆಚ್ಚು ಮಾಡಿ ಅಂದರೆ ಹೇಗೆ ಸಾಧ್ಯ? ಎಂದು ಬಾರ್ ಮಾಲೀಕರು ಆಕ್ರೊ?ಶ ಹೊರಹಾಕಿದ್ದಾರೆ.

ನಶೆ ಮಕ್ತ , ತಂಬಾಕು ಮುಕ್ತ ,ಮದ್ಯಮುಕ್ತದ ಬಗ್ಗೆ ಮಾತನಾಡುವವರು ಈಗ ಹಣದ ಆಸೆಗಾಗಿ ಹಿಂಬಾಗಿಲಿನಿಂದ ಬೆಂಬಲಿಸಿ ದ್ವಂದ್ವ ನೀತಿ ಪ್ರದರ್ಶಿಸುತ್ತಿದ್ದಾರೆ ಎಂದು ಕೆಲವರು ವ್ಯಂಗ್ಯವಾಡಿದ್ದಾರೆ. ಎಲ್ಲದಕ್ಕೂ ಇತಿ ಮಿತಿ ಇರಬೇಕು,ಬೆಲೆ ಹೆಚ್ಚಳದಿಂದ ಮದ್ಯ ಮಾರಾಟದಲ್ಲಿ ಇಳಿಕೆ ಕಂಡುಬಂದಿದೆ.



ಆದರೆ ಹಚ್ಚು ಕುಡಿಸಲು ನಾವು ಯಾವ ರೀತಿ ಮುಂದಾಬೇಕು ಎಂದು ಪ್ರಶ್ನಿಸಿದ್ದಾರೆ.

ಕುಡಿತ ಬಿಟ್ಟು ಆರೋಗ್ಯದ ಬಗ್ಗೆ ಚಿಂತಿಸುವವರಿಗೆ ಮದ್ಯ ಸೇವಿಸಲು ಆಮಿಷ ನೀಡಬೇಕಾ ಎಂದು ಪ್ರಶ್ನೆ ಎದ್ದಿದೆ.ನೆರೆಯ ರಾಜ್ಯಗಳಲ್ಲಿ ಮದ್ಯ ದರ ಕಡಿಮೆ ಮಾಡಿರುವ ಕಾರಣ ಕರ್ನಾಟಕದ ಗಡಿ ಭಾಗದಲ್ಲಿ ಮದ್ಯ ಮಾರಾಟ ಕಮಿಯಾಗಿದೆ.ಇದಲ್ಲದೆ ವಿವಿಧ ವಲಯದಿಂದ ಸಗಟು ಮದ್ಯ ಮಾರಾಟದಿಂದ ರಾಜ್ಯದ ಬಾರ್ ಮಾಲೀಕರು ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಬಾರ್‌ಲೈಸನ್ಸ್ ಕೂಡ ಹೆಚ್ಚಿಸಿ ಗಾಯದ ಮೇಲೆ ಬರೆ ಎಳೆಯಲಾಗಿದೆ ಈಗ ಮುಂದಿನ ಡಿಸೆಂಬರ್‌ನಲ್ಲಿ 2ನೇ ಕಂತು ಕಟ್ಟಬೇಕು,ಆದಾಯ ಹೆಚ್ಚಿಸಿಕೊಳ್ಳಲು ಕೇವಲ ನಮನ್ನೆ? ಟಾರ್ಗೆಟ್ ಮಾಡಲಾಗುತ್ತಿದೆ.ನಮಗೆ ನೀಡುವ ಕಿರುಕುಳ ನಿಲ್ಲಿಸದಿದ್ದರೆ ಮುಂದಿನ ದಿನಗಳಲ್ಲಿ ದೊಡ್ಡ ಹೋರಾಟ ನಡೆಸಬೇಕಾಗುತ್ತದೆ ಎಂದು ಬಾರ್ ಮಾಲೀಕರ ಸಂಘದ ರಾಜ್ಯಾಧ್ಯಕ್ಷ ಗುರುಸ್ವಾಮಿ ತಿಳಿಸಿದ್ದಾರೆ.

# ಬೆದರಿಕೆ ಹಾಕಿದ್ದು ಯಾರೆಂಬುದನ್ನು ಬಹಿರಂಗಪಡಿಸಿ : ಅಶೋಕ್ ಸವಾಲ್

**ಬೆಂಗಳೂರು,ಅ.16–** ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಬಿಜೆಪಿ ಸೇರದಿದ್ದರೆ ಜೈಲಿಗೆ ಹಾಕುವುದಾಗಿ ಯಾರು ದೂರವಾಣಿ ಕರೆ ಮಾಡಿ ಬೆದರಿಕೆ ಹಾಕಿದ್ದರು ಎಂಬುದನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಬೇಕು ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸವಾಲು ಹಾಕಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನಗೆ ಮಾಧ್ಯಮಗಳಲ್ಲಿ ಶಿವಕುಮಾರ್ ಹೇಳಿರುವ ಮಾತು ಕೇಳಿ ಆಶ್ಚರ್ಯವಾಯಿತು. ಅವರಿಗೆ ಯಾವ ಅಧಿಕಾರಿ ದೂರವಾಣಿ ಕರೆ ಮಾಡಿ ಬಿಜೆಪಿ ಸೇರ್ಪಡೆಯಾಗಬೇಕೆಂದು ಒತ್ತಡ ಹಾಕಿದ್ದರು. ಅದನ್ನು ಅಂದು ಏಕೆ ಬಹಿರಂಗಪಡಿಸಲಿಲ್ಲ. ಈಗ ಏಕಾಏಕಿ ಈ ವಿಷಯವನ್ನು ಮುನ್ನಲೆಗೆ ತಂದಿರುವ ಉದ್ದೇಶವಾದರೂ ಏನು ಎಂದು ಪ್ರಶ್ನೆ ಮಾಡಿದರು.

ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ, ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಒಪ್ಪಂದದಂತೆ ಅಧಿಕಾರ ಹಸ್ತಾಂತರ ಮಾಡದಿದ್ದರೆ ನಾನು ಕಾಂಗ್ರೆಸ್ ಬಿಡುತ್ತೇನೆ ಎಂಬ ಬೆದರಿಕೆ ಹಾಕಿರಬಹುದು. ನವೆಂಬರ್ ಕ್ರಾಂತಿ ವಿಚಾರ ಚರ್ಚೆಯಲ್ಲಿರುವಾಗ ಈ ಮಾತು ಹೇಳಿದ್ದಾರೆಂದರೆ ಏನರ್ಥ? ಎಂದು ಮರುಪ್ರಶ್ನೆ ಮಾಡಿದರು. ಇದು ಧಮಕಿ ಹಾಕುವ ಮಾತು. ಅವರ ಸ್ಟೈಲ್‌ನಲ್ಲೆ ಕಾಂಗ್ರೆಸ್ ನಾಯಕತ್ವಕ್ಕೆ ಸವಾಲು ಹಾಕಿದ್ದಾರೆ. ಅಧಿಕಾರ ಹಸ್ತಾಂತರದ ಸಮಯ ಬಂದಿದೆ. ನನಗೆ ಮುಖ್ಯಮಂತ್ರಿ ಕುರ್ಚಿ ಬಿಡದಿದ್ದರೆ ಅಷ್ಟೆ? ಎಂಬ ಸಂದೇಶವನ್ನು ರವಾನಿಸಿದ್ದಾರೆ. ಇದು ಮತ್ತೊಂದು ವಿಷಯಾಂತರ ಮಾಡುವ ಹುನ್ನಾರವಷ್ಟೆ? ಎಂದು ಆರೋಪಿಸಿದರು.

ಯಾರು ಯಾರಿಗೆ ಫೋನ್ ಮಾಡಿದ್ದರು ಎಂಬುದನ್ನು ಬಹಿರಂಗವಾಗಿ ಹೇಳಲಿ. ಇವರ ಹೇಳಿಕೆ ನೋಡಿದರೆ ನಾನು ಓರಿಜಿನಲ್ ಪಾರ್ಟಿ, ಸಿಎಂ ಸಿದ್ದರಾಮಯ್ಯ ಡೂಪ್ಲಿಕೇಟ್ ಎಂಬ ಸಂದೇಶ ಕೊಟ್ಟಂತಿದೆ. ಮಳೆ ಬೀಳುವ ಮೊದಲು ಹಬೆ ಹೆಚ್ಚಾಗಿರುತ್ತದೆ. ಆದಂತೆ ಈಗ ಕ್ರಾಂತಿಗೂ ಮೊದಲ ಲಕ್ಷಣ ಇದು ನವೆಂಬರ್ ಕ್ರಾಂತಿ ಮುನ್ಸೂಚನೆ ಎಂದು ಎಚ್ಚರಿಕೆ ಕೊಟ್ಟರು.

ಹಾಸನಾಂಬೆ ದರ್ಶನ ಪಡೆಯುವಾಗ ಡಿಕೆಶಿ ಅವರಿಗೆ ಎರಡು



ಹೂ ಪ್ರಸಾದ ಸಿಕ್ಕಿದೆ. ಒಂದು ಕೆಂಪು ಹೂವು. ಅದು ಸಿದ್ದರಾಮಯ್ಯ ನಿರ್ಗಮನ ಮತ್ತೊಂದು ಹಳದಿ ಹೂವು ಅದು ಸಿಎಂ ಖುರ್ಚಿ ಕಡೆ ಹೋಗುವುದಕ್ಕೆ ಸಿಕ್ಕ ಸೂಚನೆಯಾಗಿದೆ. ಆದರೆ ಮುಖ್ಯಮಂತ್ರಿ ಅಲ್ಲಿಗೆ ಹೋದಾಗ ಸೊನ್ನೆ ಸಿಕ್ಕದೆ. ದೇವರಿಗೇ ಇವರಿಬ್ಬರು ಪರೀಕ್ಷೆವೊಡ್ಡಿದ್ದಾರೆ. ಇಬ್ಬರಿಗೂ ಶಹಬ್ಬಾಸ್‌ಗಿರಿ ಕೊಡಬೇಕು ಎಂದು ಹೇಳಿದರು.

ಡಿಕೆಶಿ ಬಿಜೆಪಿಗೆ ಬಂದರೆ ಕರೆದುಕೊಳ್ಳುತ್ತಿರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅಶೋಕ್, ಬಸ್ ಹತ್ತಿದ ಮೇಲೆ ಟಿಕೆಟ್ ಕೊಡುವುದು ಕಂಡೆಕ್ಟರ್ ಕೆಲಸ. ಹತ್ತಿಸಿಕೊಳ್ಳುವುದು ಡ್ರೈವರ್ ಕೆಲಸ. ಅವರು ಮೊದಲು ಬಸ್ ಹತ್ತಲಿ. ಯಾವ ಬಸ್ ಹತ್ತುತ್ತಾರೋ ಕಾದು ನೋಡೋಣ. ಆಮೇಲೆ ಎಲ್ಲಿಗೆ, ಯಾವ ಟಿಕೆಟ್ ಕೊಡಬೇಕು ಎಂಬುದನ್ನು ನಾವು ನಿರ್ಧರಿಸುತ್ತೇವೆ. ಲೋನ್ ಅಪ್ಲೈ ಮಾಡಿದವರಿಗೆ ಮಾತ್ರ ಲೋನ್ ಸಿಗೋದು,ಅಂದರೆ ಟ್ರಾಕ್‌ನಲ್ಲಿ ಇದ್ದವರಿಗೆ ಅವಕಾಶ ಸಿಗತ್ತದೆ. ಡಿಕೆ ಮಾನವಾಗಿದ್ದಾರೆ ಎಂದರೆ ಅದರ ಹಿಂದೆ ಬೇರೆ ಇದೆ ಎಂದು ಮಾರ್ಮಿಕವಾಗಿ ನುಡಿದರು.

# ಕಾರಿನ ಏರ್‌ಬ್ಯಾಗ್ ಸ್ಫೋಟಗೊಂಡು ಬಾಲಕ ಸಾವು

**ಚೆನ್ನೈ,ಅ.16–** ಕುಟುಂಬ ಸಮೇತ ಬಾಡಿಗೆ ಕಾರಿನಲ್ಲಿ ಹೋಗುತ್ತಿದ್ದಾಗ ಮತ್ತೊಂದು ವಾಹನಕ್ಕೆ ಹೊಡೆದು ಸಂಭವಿಸಿದ ಅಪಘಾತದಲ್ಲಿ ಕಾರಿನ ಏರ್‌ಬ್ಯಾಗ್ ಮುಖಕ್ಕೆ ಬಡಿದಿದ್ದರಿಂದ ಬಾಲಕನೊಬ್ಬ ಮೃತಪಟ್ಟಿರುವ ಘಟನೆ ತಿರುಪೋರೂರು ಬಳಿಯ ಹಳೆಯ ಮಹಾ ಬಲಿಪುರಂ ರಸ್ತೆಯಲ್ಲಿ ನಡೆದಿದೆ.

ಕೆವಿನ್(7) ಎಂದು ಮೃತಪಟ್ಟ ದುರ್ದೈವಿ. ಪೊಲೀಸ್ ವರದಿಗಳ ಪ್ರಕಾರ, ಚೆಂಗಲ್ಪಟ್ಟು ಜಿಲ್ಲೆಯ ಪುದುಪಟ್ಟಣಂ ಗ್ರಾಮದ ನಿವಾಸಿ ವೀರಮುತ್ತು ತನ್ನ ಪತ್ನಿ, ಅವರ ಏಳು ವರ್ಷದ ಮಗ ಕವಿನ್ ಮತ್ತು ಇತರ ಇಬ್ಬರೊಂದಿಗೆ ಬಾಡಿಗೆ ಕಾರಿನಲ್ಲಿ ಚೆನ್ನೈಗೆ ಪ್ರಯಾಣಿಸುತ್ತಿದ್ದರು. ವಾಹನವನ್ನು ವಿಘ್ನೆ?ಶ್ ಎಂಬ ವ್ಯಕ್ತಿ ಚಲಾಯಿಸುತ್ತಿದ್ದರು.

ಅವರ ಮುಂದೆ ಪ್ರಯಾಣಿಸುತ್ತಿದ್ದ ಸುರೇಶ್ ಚಲಾಯಿಸುತ್ತಿದ್ದ ಕಾರು ಇದ್ದಕ್ಕಿದ್ದಂತೆ ಎಡಕ್ಕೆ ತಿರುಗಿದಾಗ ಬಾಡಿಗೆ ಕಾರಿನಲ್ಲಿದ್ದ ಏರ್‌ಬ್ಯಾಗ್ ಸ್ಫೊ?ಟಗೊಂಡು ಅಪಘಾತ ಸಂಭವಿಸಿದೆ. ಈ ವೇಳೆ ಅಲ್ಲಿದ್ದವರು ಮತ್ತು ದಾರಿಹೋಕರು ಸಹಾಯಕ್ಕೆ ಧಾವಿಸಿದ್ದು, ಗಾಯಗೊಂಡ ಬಾಲಕನನ್ನು ರಕ್ಷಿಸಿ 108 ಆಂಬ್ಯುಲೆನ್‌ನಲ್ಲಿ ತಿರುಪೋರೂರು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದರಾದರೂ ಅದಾಗಲೇ ಬಾಲಕ ಮೃತಪಟ್ಟಿದ್ದ.

ದುರಂತವೆಂದರೆ ಮಕ್ಕಳ ನಿಯಂತ್ರಣ ವ್ಯವಸ್ಥೆಯಲ್ಲಿ ಕುಳಿತುಕೊಳ್ಳದೆ, ಮುಂಭಾಗದ ಸೀಟಿನಲ್ಲಿ ತನ್ನ ತಂದೆಯ ಮಡಿಲಲ್ಲಿ ಕುಳಿತಿದ್ದ ಬಾಲಕ ಕವಿನ್, ನಿಯೋಜಿಸಲಾದ



ಏರ್‌ಬ್ಯಾಗ್‌ನ ಸಂಪೂರ್ಣ ಬಲವನ್ನು ನೇರವಾಗಿ ತನ್ನ ಮುಖಕ್ಕೆ ತೆಗೆದುಕೊಂಡನು. ಅವನು ತಕ್ಷಣ ಪ್ರಜ್ಞೆ ತಪ್ಪಿದನು.ಆಸ್ಪತ್ರೆಗೆ ತಲುಪಿದ ಕೂಡಲೇ ಮಗು ಮೃತಪಟ್ಟಿದೆ ಎಂದು ಘೋಷಿಸಲಾಯಿತು.

ಬಾಲಕ ಕಾರಿನ ಮುಂಭಾಗದ ಪ್ರಯಾಣಿಕರ ಸೀಟಿನಲ್ಲಿ ತನ್ನ ತಂದೆಯ ಮಡಿಲಲ್ಲಿ ಕುಳಿತಿದ್ದ. ಈ ಸಂರ್ದದಲ್ಲಿ ಕಾರು ಮತ್ತೊಂದು ವಾಹನಕ್ಕೆ ಡಿಕ್ಕಿ ಹೊಡೆದಿದ್ದು, ಏರ್‌ಬ್ಯಾಗ್ ನಿಯೋಜನೆಯ ಬಲವು ಬಾಲಕನಿಗೆ ಮಾರಕ ಗಾಯಗಳನ್ನು ಉಂಟು ಮಾಡಿವೆ. ಇದು ಕಾರಿನ ಸುರಕ್ಷತಾ ಮಾನದಂಡಗಳ ಉಲ್ಲಂಘನೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಆರ್ಬಿಟ್ ಸಂಸ್ಥೆಯಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ



**ಹುಮನಾಬಾದ್,ಅ.16–** ಪಟ್ಟಣದ ಹೊರವಲಯದಲ್ಲಿರುವ ಆರ್ಬಿಟ್ ಸಂಸ್ಥೆಯಲ್ಲಿ "ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ"ಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಈ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ್, ತಾಲೂಕ ಪಂಚಾಯತ್ ಹುಮ್ನಾಬಾದ್, ಹಾಗೂ ವಿಶೇಷ ಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಗಳ ಜಂಟಿ ಆಶ್ರಯದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದ ವಿಶೇಷ ಅತಿಥಿಯಾಗಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪ್ರಶಾಂತ್ ಬಾದವಡಗಿ ಭಾಗವಹಿಸಿ ಮಾತನಾಡಿದರು. ಅವರು "ಪ್ರತಿಯೊಬ್ಬ ವ್ಯಕ್ತಿಗೂ ಘನತೆಯಿಂದ ಬದುಕುವ ಹಕ್ಕು ಸಂವಿಧಾನದಿಂದಲೇ ದೊರೆತಿದೆ. ಆದರೆ, ಇಂದಿನ ಜೀವನ ಶೈಲಿಯಿಂದಾಗಿ ಅನೇಕರು ಮಾನಸಿಕ ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಪ್ರತಿಯೊಬ್ಬರೂ ಮಾನಸಿಕ ಆರೋಗ್ಯದ ಕಡೆ ಹೆಚ್ಚಿನ ಗಮನ ನೀಡಿ, ತಜ್ಞರ ಮಾರ್ಗದರ್ಶನದಂತೆ ಸೂಕ್ತ ಚಿಕಿತ್ಸೆ ಪಡೆಯಬೇಕು. ಈ ನಿಟ್ಟಿನಲ್ಲಿ ಆರ್ಬಿಟ್ ಸಂಸ್ಥೆಯು ನಮ್ಮ ಭಾಗದಲ್ಲಿ ಶ್ಲಾಘನೀಯ ಕೆಲಸ ಮಾಡುತ್ತಿದೆ," ಎಂದು ಪ್ರಶಂಸಿಸಿದರು.

ಕಾರ್ಯಕ್ರಮದ ಪ್ರಮುಖ ಉಪನ್ಯಾಸಕರಾಗಿ ತಜ್ಞ ಮನೋವೈದ್ಯರಾದ ಡಾ. ರಿತೇಶ್ ಸೂತ್ರವೇ ಮಾತನಾಡಿ "ಮಾನಸಿಕ ಆರೋಗ್ಯದ ಮಹತ್ವ ಮತ್ತು ಅದನ್ನು ಕಾಪಾಡಿಕೊಳ್ಳುವ ಮಾರ್ಗಗಳು" ಕುರಿತು ವಿಸ್ತೃತ ಉಪನ್ಯಾಸ ನೀಡಿದರು. ಅವರು ತಮ್ಮ ಮಾತಿನಲ್ಲಿ ಜೀವನದ ಒತ್ತಡಗಳು, ಆತಂಕ, ಸಾಮಾಜಿಕ ಒತ್ತಾಯಗಳು ಹಾಗೂ ಅವುಗಳ ಪರಿಣಾಮಗಳನ್ನು ವಿವರಿಸಿ, ಧ್ಯಾನ, ವ್ಯಾಯಾಮ ಮತ್ತು ಸಕಾರಾತ್ಮಕ ಚಿಂತನೆಯ ಮಹತ್ವವನ್ನು ವಿವರಿಸಿದರು.

ಪಿಎಸ್ ಸುರೇಶ್ ಕುಮಾರ್ ಚೌಹಾಣ ಅವರು ಮಾನಸಿಕ ಆರೋಗ್ಯದ ವಿಷಯದಲ್ಲಿ ಕಾನೂನಿನಡಿಯಲ್ಲಿ ಲಭ್ಯವಿರುವ ಸಹಾಯ ಮತ್ತು ಅವಕಾಶಗಳ ಕುರಿತು ವಿವರಿಸಿದರು. ವೈದ್ಯರಾದ ಡಾ. ಮುಸ್ತಫ ರವರು ಸಹ ಉಪಸ್ಥಿತರಿದ್ದು, ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ಶುಭಾಶಯಗಳನ್ನು ಕೋರಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಫಾದರ್ ವಿಕ್ಟರ್ ವಾಸ್ ವಹಿಸಿಕೊಂಡು ಮಾತನಾಡಿದರು. ಅವರು ಮಾನಸಿಕ ಆರೋಗ್ಯದ ಕುರಿತು ಸಮಾಜದಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ. ಪ್ರತಿಯೊಬ್ಬರೂ ಮಾನಸಿಕವಾಗಿ ಬಲಿಷ್ಠರಾಗಲು ಸಹಾನುಭೂತಿ, ಪ್ರೋತ್ಸಾಹ ಮತ್ತು ಪರಸ್ಪರ ಬೆಂಬಲದ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳು ಆರ್ಬಿಟ್ ಸಂಸ್ಥೆಯ ಕಾರ್ಯಕ್ಕೆ ನೀಡುತ್ತಿರುವ ಸಹಕಾರ ಶ್ಲಾಘನೀಯ, ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕ ವಕೀಲರ ಸಂಘದ ಅಧ್ಯಕ್ಷ ಶ ಮಂಜುನಾಥ ರೆಡ್ಡಿ, ಕಾರ್ಯದರ್ಶಿ ವಿಜಯಕುಮಾರ್ ಜ್ಯೋತಿಗೊಂಡ, ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಶಿಬಿರದ ಸಿಬ್ಬಂದಿ ವರ್ಗದವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಆರ್ಬಿಟ್ ಸಂಸ್ಥೆಯ ಸಿಬ್ಬಂದಿ, ಫಲಾನುಭವಿಗಳು, ಪೋಷಕರು ಹಾಗೂ ಸ್ಥಳೀಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಕಾರ್ಯಕ್ರಮದ ಅಂತ್ಯದಲ್ಲಿ ಅತಿಥಿಗಳಿಗೆ ಗೌರವ ಸೂಚಿಸಿ ಧನ್ಯವಾದಗಳನ್ನು ಸಲ್ಲಿಸಲಾಯಿತು. ಪೂಜಾ ಪ್ರಾರ್ಥನೆ ಸಲ್ಲಿಸಿ, ರವಿ ವಂದನೆ ಸಲ್ಲಿಸಿದರು ಹಾಗೂ ಪ್ರೀತಿ ನಿರೂಪಿಸಿದರು.

## ನಿಮ್ಮ ಮತ್ತು ನಿಮ್ಮವರ ಅರೋಗ್ಯ ರಕ್ಷಣೆಗೆ ಉತ್ತಮವಾಗಿ ಕೈ ತೊಳೆಯಿರಿ




**ಭಾಲ್ಕಿ,ಅ.16–** ನಿಮ್ಮ ಹಾಗು ನಿಮ್ಮವರ ಆರೋಗ್ಯದ ರಕ್ಷಣೆಗಾಗಿ ಉತ್ತಮವಾಗಿ ಕೈ ತೊಳೆಯುವ ಕಾರ್ಯಮಾಡಬೇಕು ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಮುರಳಿಧರ.ಎಚ್.ಎಲ್ ಹೇಳಿದರು.

ಪಟ್ಟಣದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಚೇರಿಯಲ್ಲಿ ಬುಧವಾರ ಶ್ರೀಕ್ಷೇತ್ರ ಗ್ರಾಮಾಭಿವೃದ್ಧಿಯೋಜನೆ ಬಿ.ಸಿ.ಟ್ರಸ್ಟ್ ಹಾಗು ಯುನಿಸೆಫ್ ಸಹಯೋಗದಲ್ಲಿ ನಡೆದ ವಿಶ್ವ ಕೈತೊಳೆಯುವ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೇಹದ ಎಲ್ಲಾ ಅಂಗಾಂಗಗಳಲ್ಲಿ ಕೈ ಉತ್ತಮವಾದ ಅಂಗಾಂಗವಾಗಿದೆ. ಒಳ್ಳೆಯದು ಮತ್ತು ಕೆಟ್ಟದು ಸೇರಿದಂತೆ ಎಲ್ಲಾ ಕೆಲಸಗಳಿಗೂ ಕೈ ಸಹಾಯಕವಾಗಿದೆ. ಕೈ ಯಿಂದಲೇ ಎಲ್ಲವನ್ನೂ ಮಾಡಲಾಗುವುದು. ಹೀಗಾಗಿ ನಮ್ಮ ಹಾಗು ನಮ್ಮವರ ಆರೋಗ್ಯ ರಕ್ಷಣೆಗಾಗಿ ಉತ್ತಮವಾಗಿ ಕೈ ತೊಳೆದುಕೊಳ್ಳಬೇಕು ಎಂದು ಹೇಳಿದರು.

# ರೈಲು ಮಾರ್ಗಗಳನ್ನು ಪುನಃ ಪ್ರಾರಂಭಿಸುವಂತೆ ಕೇಂದ್ರ ಹಣಕಾಸು ಸಚಿವರಿಗೆ ಮನವಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.16–** ರಾಯಚೂರು ಜಿಲ್ಲೆಗೆ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಕ್ಕೆ ಆಗಮಿಸಿದ ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ರವರಿಗೆ ಸಿಂಧನೂರು ಪಟ್ಟಣದ ಸರ್ಕಿಟ್ ಹೌಸ್‌ನಲ್ಲಿ ಮಾನ್ವಿ ತಾಲೂಕಿನ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮಾನ್ವಿ ಮಂಡಲ ಬಿ.ಜೆ.ಪಿ. ಪಕ್ಷದ ನಿಯೋಗದೊಂದಿಗೆ ತೆರಳಿ ಬಿ.ಜೆ.ಪಿ. ಮಾನ್ವಿ ಮಂಡಲ ಮಾಜಿ ಅಧ್ಯಕ್ಷರಾದ ಜೆ. ಸುಧಾಕರ್ ಮನವಿ ಸಲ್ಲಿಸಿ ಮಾತನಾಡಿ ಆಂಧ್ರಪ್ರದೇಶದ ಪೂರ್ವ ಗೋದಾವರಿ, ಪಶ್ಚಿಮ ಗೋದಾವರಿ ಮತ್ತು ಕೃಷ್ಣ ಜಿಲ್ಲೆಗಳಿಂದ ಸುಮಾರು 5 ಲಕ್ಷ ಜನರು ಕಳೆದ 60 ವರ್ಷಗಳಿಂದ ರಾಯಚೂರು ಜಿಲ್ಲೆಯ ಸಿಂಧನೂರು, ಮಾನ್ವಿ, ಮಸ್ಕಿ, ಲಿಂಗಸುಗೂರು, ದೇವದುರ್ಗ ಮತ್ತು ರಾಯಚೂರು ತಾಲೂಕುಗಳಲ್ಲಿ ಹಾಗೂ ಯಾದಗಿರಿ ಜಿಲ್ಲೆಯ ಯಾದಗಿರಿ, ಶೋರಾಪುರ ಮತ್ತು ಶಹಾಪುರ ತಾಲೂಕುಗಳು, ಕೊಪ್ಪಳ ಜಿಲ್ಲೆಯ ಕಾರಟಗಿ, ಗಂಗಾವತಿ ತಾಲೂಕುಗಳಲ್ಲಿ ನೆಲೆಸಿ ಕೃಷಿ, ಕೈಗಾರಿಕೆ ಮತ್ತು ವ್ಯಾಪಾರ ಕ್ಷೇತ್ರಗಳಲ್ಲಿ ತಮ್ಮನು ತೊಡಗಿಸಿಕೊಂಡಿದ್ದಾರೆ ಅದ್ದರೆ ಇವರು ತಮ್ಮ ಸಂಬಂದಿಗಳ ಮನೆಗಳಲ್ಲಿ ನಡೆಯುವ ಶುಭಸಮಾರಂಭಗಳಿಗೆ ಹೋಗುವುದಕ್ಕೆ ಹಾಗೂ ತಮ್ಮ ಕುಟುಂಬದ ಉಳಿದ ಸದಸ್ಯರನ್ನು ಭೇಟಿ ಮಾಡುವುದಕ್ಕೆ 8ನೂರು ಕಿ.ಮಿ. ದೂರ ಇರುವ ಆಂಧ್ರ ಪ್ರದೇಶದ ವಿವಿಧ ಪಟ್ಟಣಗಳಿಗೆ ನಿರಂತರವಾಗಿ ಹೋಗಬೇಕಾಗುತ್ತದೆ ಹಾಗೂ ಅಲ್ಲಿನ ಜನರು ಇಲ್ಲಿಗೆ ಬರುವುದಕ್ಕೆ ಆನುಕೂಲವಾಗಿದ್ದ ರಾಜ್ಯದ ರಾಯಚೂರು ನಗರದಿಂದ ಆಂಧ್ರಪ್ರದೇಶದ ಕಾಕಿನಾಡ ನಡುವೆ ಸಂಚರಿಸುವ 07246 ಸಂಖ್ಯೆಯ ರೈಲು ಕೆಲವು ತಿಂಗಳಿಂದ ಸಂಚಾರ ನಡೆಸುತ್ತಿಲ್ಲ ಅದ್ದರಿಂದ ರೈಲು ಸಂಖ್ಯೆ 07246 & 07245 ಅನ್ನು ಮಂತ್ರಾಲಯದಿಂದ ಪುನರಾರಂಭಿಸಬೇಕು. ಆಂಧ್ರಪ್ರದೇಶದ ಮಂತ್ರಾಲಯ ರೈಲು ನಿಲ್ದಾಣದಿಂದ ಮಚಲಿಪಟ್ಟಣಕ್ಕೆ ಸಂಚರಿಸುತ್ತಿದ್ದ 07067 ಸಂಖ್ಯೆಯ ರೈಲು ಮತ್ತು ಪ್ರತಿಯಾಗಿ 07068 ಸಂಖ್ಯೆಯ ರೈಲು ಸಹ ಕೆಲವು ದಿನಗಳಿಂದ ಸಂಚಾರ ಸ್ಥಗಿತಗೊಂಡಿದೆ ಮಹೇಬೂಬ್ ನಗರದಿಂದ ವಿಶಾಖಪಟ್ಟಣಕ್ಕೆ 12862 ಮತ್ತು 12861 ಸಂಖ್ಯೆಯ ರೈಲು ಇದ್ದು, ಈ ರೈಲನ್ನು ರಾಯಚೂರು ರೈಲು ನಿಲ್ದಾಣದವರೆಗೆ ರೈಲು ಸಂಚಾರವನ್ನು ವಿಸ್ತರಿಸಿದಲ್ಲಿ ಈ ಭಾಗದ ಪ್ರವಾಸಾಂಧ್ರ ನಿವಾಸಿಗಳಿಗೆ .ವೃದ್ದರಿಗೆ, ಮಹಿಳೆಯ ರಿಗೆ,ಮಕ್ಕಳಿಗೆ ಸಂಚರಿಸುವುದಕ್ಕೆ ಅನುಕೂಲವಾಗುತ್ತದೆ ಅದ್ದರಿಂದ ಸಾರ್ವಜನಿಕ ಹಿತಾಸಕ್ತಿಗಾಗಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಜಿ ಅವರೊಂದಿಗೆ ನಮ್ಮ ಬೇಡಿಕೆಗಳ ಕುರಿತು ಚರ್ಚೆ ನಡೆಸಿ ಅನು ಕೂಲ ಮಾಡಿಕೊಡುವಂತೆ ಮನವಿ ಮಾಡಿಕೊಂಡರು.

ಮಾನ್ವಿ ಬಿ.ಜೆಪಿ. ಮಂಡಲ ಉಪಾಧ್ಯಕ್ಷರಾದ ವಿಶ್ವನಾಥ ಬಿ ನಂದಿಹಾಳ್, ತಾ. ಮಹಾ ಶಕ್ತಿ ಕೇಂದ್ರದ ಅಧ್ಯಕ್ಷರಾದ ಕುಮಾರ ಸ್ವಾಮಿ ಮೇದಾ, ಕಿಸಾನ್ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಶಿವಲಿಂಗಯ್ಯ ಸ್ವಾಮಿ, ಕಿಸಾನ್ ಮೋರ್ಚಾ ತಾ. ಕಾರ್ಯದರ್ಶಿ ಜಿ.ಉಮಾಪತಿ ನಾಯಕ್, ಮುಖಂಡರಾದ ಗೋಪಾಲ ಇಭ್ರಮಪುರ ಸೇರಿದಂತೆ ಇನ್ನಿತರರು ಇದ್ದರು.

# ಆರ್‌ಎಸ್‌ಎಸ್ ಶತಮಾನೋತ್ಸವದಲ್ಲಿ ಪಾಲ್ಗೊಂಡಿದ್ದ ಆರ್‌ಡಿಪಿಆರ್ ನೌಕರರ ಅಮಾನತ್ತು!



**ಬೆಂಗಳೂರು, ಅ.16–** ಆರ್‌ಎಸ್‌ಎಸ್‌ನ ಶತಮಾನೋತ್ಸವದಲ್ಲಿ ಭಾಗವಹಿಸಿದ್ದ ತಮ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಷೋಕಾಸ್ ನೋಟಿಸ್ ನೀಡಲಾಗಿದ್ದು, ಒಂದೆರಡು ದಿನಗಳಲ್ಲಿ ಅಮಾನತು ಗೊಳಿಸುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ ಇಲಾಖೆಯ ಖಾಯಂ ಸಿಬ್ಬಂದಿ ಹಾಗೂ ಅಧಿಕಾರಿಗಳು ಗಣವೇಷ ಧರಿಸಿ, ಶತಮಾನೋತ್ಸವದಲ್ಲಿ ಭಾಗವಹಿಸಿರುವುದನ್ನು ಗುರುತಿಸಲಾಗಿದೆ ಎಂದು ಹೇಳಿದರು.

ಸರ್ಕಾರಿ ನೌಕರರು ನಿಯಮಗಳನ್ನು ಸರಿಯಾಗಿ ಪಾಲಿಸದೇ ಇರುವ ಕಾರಣಕ್ಕೆ ತಾವು ಮುಖ್ಯಮಂತ್ರಿಯವರಿಗೆ ಪತ್ರ ಬರೆದಿದ್ದೇನೆ. ಕೆಲವರು ಸರ್ಕಾರದ ಹಣವನ್ನು ಗುರುಪೂರ್ಣಿಮೆಗಾಗಿ ದೇಣಿಗೆ ನೀಡಿದ್ದಾರೆ. ಪಿಡಿಓಗಳಿಂದ 2 ಸಾವಿರ ರೂ. ಹಣ ಪಡೆದಿರುವ ಮಾಹಿತಿಯಿದೆ. ಅಧಿಕಾರಿಗಳು ತಮ ವೈಯಕ್ತಿಕ ಹಣವನ್ನು ದೇಣಿಗೆ ನೀಡಲಿ. ಆದರೆ ಸರ್ಕಾರದ ಹಣ ನೀಡಬಾರದು ಎಂದು ಎಚ್ಚರಿಕೆ ನೀಡಿದರು.

ಸರ್ಕಾರಿ ನೌಕರರು ರಾಜಕೀಯ ಚಟುವಟಿಕೆಗಳಲ್ಲಿ ಭಾಗವಹಿಸುವಂತಿಲ್ಲ ಎಂಬ ಸ್ಪಷ್ಟ ನಿಯಮ ಇದೆ. ಯಾರಿಗಾದರೂ ವೈಯಕ್ತಿಕವಾಗಿ ರಾಜಕೀಯ ಆಸೆ ಇದ್ದರೆ, ಸರ್ಕಾರಿ ಹುದ್ದೆಗೆ ರಾಜೀನಾಮೆ ಕೊಟ್ಟು ಹೋಗಲಿ ಎಂದು ಎಚ್ಚರಿಸಿದರು.

ಸರ್ಕಾರಿ ಶಾಲಾ ಆವರಣಗಳಲ್ಲಿ ಖಾಸಗಿ ಸಂಘಸಂಸ್ಥೆಗಳ ಚಟುವಟಿಕೆ ನಡೆಯಬಾರೆಂದು ಜಗದೀಶ್ ಶೆಟ್ಟರ್ ಕಾಲದಲ್ಲೆ ಸುತ್ತೋಲೆ ನಡೆಸಲಾಗಿತ್ತು. ನಾನು ಅದನ್ನೆ ಪ್ರತಿಪಾದಿಸಿದ್ದೇನೆ. ಸುತ್ತೋಲೆ ಹೊರಡಿಸಿದ ಬಿಜೆಪಿ ಸರ್ಕಾರ ಆರ್‌ಎಸ್‌ಎಸ್ ವಿರೋಧಿಯೇ ಎಂದು ಪ್ರಶ್ನಿಸಿದರು.

ಹಿಂದುತ್ವವನ್ನು ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಬಳಕೆ ಮಾಡಿಕೊಳ್ಳಲಾಗುತ್ತಿದೆ.

ಸಿದ್ದರಾಮಯ್ಯ ಅವರು, ನಂಬದೇ ಇದ್ದರೂ ಡಿ.ಕೆ.ಶಿವಕುಮಾರ್ ಅವರಿಗೆ ನಂಬಿಕೆ ಜಾಸ್ತಿ. ಕೆಲವು ವಿಚಾರಗಳಲ್ಲಿ ನಾನು ನಂಬದೇ ಇದ್ದರೂ ನಮ ತಾಯಿ ನಂಬುತ್ತಾರೆ. ಯಾರ ನಂಬಿಕೆಗಳಿಗೂ ಧಕ್ಕೆಯಾಗಬಾರದು. ಹಾಗೆಯೇ ಸಂವಿಧಾನದ ಆಶಯಗಳು ಪಾಲನೆಯಾಗಬೇಕು ಎಂದರು. ತಾವು ಈ ಹಿಂದೆ ಪಿಎಸ್‌ಐ ಹಗರಣವನ್ನು ಪ್ರಸ್ತಾಪಿಸುವಾಗಲೂ ಇದೇ ರೀತಿಯ ಟೀಕೆಗಳು ಕೇಳಿ ಬಂದಿದ್ದವು. ಈಗ ತಮ ವಿರುದ್ಧ ನಡೆಯುತ್ತಿರುವ ಷಡ್ಯಂತ್ರಗಳು ಅಚ್ಚರಿಯೇನಲ್ಲ.

# ಪ್ರೇಮಾನಂದ್‌ಗೆ ಮೂತ್ರಪಿಂಡ ದಾನಕ್ಕೆ ಮುಂದಾದ ಏಜಾಜ್

**ಮುಂಬೈ ಅ,16–** ಮಾಜಿ ಬಿಗ್ ಬಾಸ್ ಸ್ಪರ್ಧಿ ಏಜಾಜ್ ಖಾನ್ ತಮ್ಮ ಮೂತ್ರಪಿಂಡವನ್ನು ಸಂತ ಪ್ರೇಮಾನಂದ ಜಿ ಮಹಾರಾಜ್ ಅವರಿಗೆ ದಾನ ಮಾಡುವ ಬಯಕೆಯನ್ನು ವ್ಯಕ್ತಪಡಿಸಿದ್ದಾರೆ. ಪ್ರೇಮಾನಂದ ಜಿ ಅವರ ಯೋಗಕ್ಷೇಮಕ್ಕಾಗಿ ಪ್ರಾರ್ಥಿಸುವಂತೆ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಭಾವನಾತ್ಮಕ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ತಮ್ಮ ಮೂತ್ರಪಿಂಡವು ಹೊಂದಿಕೆಯಾದರೆ, ನಾನು ದಾನ ಮಾಡಲು ಸಿದ್ಧನಿದ್ದೇನೆ ಎಂದು ಏಜಾಜ್ ಹೇಳಿದರು. ಈ ಸುದ್ದಿ ಭಕ್ತರಿಗೆ ಭರವಸೆಯ ಕಿರಣವನ್ನು ತಂದಿದೆ.

ವೃಂದಾವನ ಸಂತ ಪ್ರೇಮಾನಂದ ಜಿ ಮಹಾರಾಜ್ ಕೆಲವು ಸಮಯದಿಂದ ಗಂಭೀರ ಸ್ಥಿತಿಯಲ್ಲಿದ್ದಾರೆ. ಅವರು ಹಲವಾರು ವರ್ಷಗಳಿಂದ ಎರಡೂ ಮೂತ್ರಪಿಂಡಗಳಿಲ್ಲದೆ ಬದುಕುತ್ತಿದ್ದಾರೆ, ಇದು ಅವರ ಭಕ್ತರಲ್ಲಿ ಕಳವಳವನ್ನುಂಟುಮಾಡಿದೆ. ಅವರ ಶೀಘ್ರ ಚೇತರಿಕೆಗಾಗಿ ಎಲ್ಲರೂ ಪ್ರಾರ್ಥಿಸುತ್ತಿದ್ದಾರೆ. ಏತನ್ಮಧ್ಯೆ, ಮಾಜಿ ಬಿಗ್ ಬಾಸ್ ಸ್ಪರ್ಧಿ ಎಜಾಜ್ ಖಾನ್ ಸೇರಿದಂತೆ ಹಲವಾರು ಪ್ರಮುಖ ವ್ಯಕ್ತಿಗಳು ಸಹ ಅವರಿಗೆ ಸಹಾಯ ಮಾಡಲು ಮುಂದೆ ಬರುತ್ತಿದ್ದಾರೆ.

ರಾಜ್ ಕುಂದ್ರಾ ಮತ್ತು ಇತರ ಭಕ್ತರನ್ನು ಅನುಸರಿಸಿ, ನಟ ಐಜಾಜ್ ಖಾನ್ ಕೂಡ ಸಂತ ಪ್ರೇಮಾನಂದ ಜಿ ಮಹಾರಾಜ್ ಅವರಿಗೆ ತಮ್ಮ ಮೂತ್ರಪಿಂಡವನ್ನು ದಾನ ಮಾಡುವ ಬಯಕೆಯನ್ನು ವ್ಯಕ್ತಪಡಿಸಿದ್ದಾರೆ. ಅವರು ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ವೀಡಿಯೊವನ್ನು ಹಂಚಿಕೊಂಡಿದ್ದಾರೆ, ಆಧ್ಯಾತ್ಮಿಕ ಗುರುಗಳ ಯೋಗಕ್ಷೇಮಕ್ಕಾಗಿ ಪ್ರಾರ್ಥಿಸುವಂತೆ ತಮ್ಮ ಅನುಯಾಯಿಗಳಿಗೆ ಮನವಿ ಮಾಡಿದ್ದಾರೆ. ವೈದ್ಯಕೀಯವಾಗಿ ಸಾಧ್ಯವಾದರೆ, ಅವರು ಕೊಡುಗೆ ನೀಡಲು ಸಿದ್ಧರಿದ್ದಾರೆ ಎಂದು ಅವರು ಹೇಳಿದ್ದಾರೆ.

ವಿಡಿಯೋದಲ್ಲಿ, ಎಜಾಜ್ ಖಾನ್, ಅಸ್ಸಲಾಮು ಅಲೈಕುಮ್ ಸ್ನೇಹಿತರೇ  ಪ್ರೇಮಾನಂದ್ ಜೀ ಯಾವುದೇ ಧರ್ಮದ ವಿರುದ್ಧ ಎಂದಿಗೂ ಮಾತನಾಡದ ವ್ಯಕ್ತಿ. ಅವರ ಮೂತ್ರಪಿಂಡಗಳಿಗೆ ಹೊಂದಿಕೆಯಾದರೆ ನನ್ನ ಒಂದು ಮೂತ್ರಪಿಂಡವನ್ನು ದಾನ ಮಾಡಲು ನಾನು ಬಯಸುತ್ತೇನೆ ಎಂದು ಹೇಳಿದ್ದಾರೆ.ಪ್ರೇಮಾನಂದ್ ಜಿ ಮಹಾರಾಜ್ ಅವರಿಗೆ ಮೂತ್ರಪಿಂಡವನ್ನು ದಾನ ಮಾಡಲು ಅನೇಕ ಭಕ್ತರು ಮುಂದೆ ಬಂದಿದ್ದು ಆದರೆ ಅವರು ಅವೆಲ್ಲವನ್ನೂ ನಿರಾಕರಿಸಿದ್ದಾರೆ. ಎಲ್ಲರೂ ಅವರ ಆರೋಗ್ಯಕ್ಕಾಗಿ ಪ್ರಾರ್ಥಿಸುತ್ತಿದ್ದಾರೆ.

## ಅದಿರು ನಾಪತ್ತೆ ಪ್ರಕರಣ ಬಳ್ಳಾರಿ ಹೊಸಪೇಟೆಯಲ್ಲಿ ಇಡಿ ದಾಳಿ



**ಬಳ್ಳಾರಿ, ಅ.16–** ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿ ಬಳ್ಳಾರಿ ಮತ್ತು ಹೊಸಪೇಟೆಯಲ್ಲಿ ಗುರುವಾರ ಇಡಿ ಅಧಿಕಾರಿಗಳ ತಂಡ ದಾಳಿ ನಡೆಸಿದೆ.ನಗರದ ಉದ್ಯಮಿ ಕೆ.ನಾಗರಾಜ ಅವರ ಮನೆಯ ಮೇಲೆ ಇಂದು ಹತ್ತು ಜನ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ನಗರದ ತಾಳೂರು ರಸ್ತೆಯಲ್ಲಿನ  ರೇವಣ ಸಿದ್ದೇಶ್ವರ. ಅಪಾರ್ಟ್ ಮೆಂಟ್ ನಲ್ಲಿ ವಾಸವಾಗಿರುವ ನಾಗರಾಜ್ ಅವರ ಮನೆಗೆ ಬೆಳ್ಳಂ ಬೆಳಿಗ್ಗೆ ಇಡಿ ಅಧಿಕಾರಿಗಳು ಆಗಮಿಸಿ ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.ನಾಗರಾಜ್ ಅವರು ಊರಲ್ಲಿ ಇಲ್ಲ. ನ್ಯಾಯಾಲಯದ ಪ್ರಕರಣದ ವಿಚಾರಣೆಗೆ ಬೆಂಗಳೂರಿಗೆ ತೆರಳಿದ್ದಾರೆ.ಇವರು ಈ ಹಿಂದೆ ಬೇಲಿಕೇರಿ ಬಂದರು ಅದಿರು ನಾಪತ್ತೆ ಪ್ರಕರಣದಲ್ಲಿ ಸಿಬಿಐ ನಿಂದ ಬಂಧಿತರಾಗಿ ಜಾಮೀನಿನ ಮೇಲೆ ಹೊರಗೆ ಇದ್ದಾರೆ.ಇವರು ಮಾಜಿ ಸಚಿವ ಬಿ.ನಾಗೇಂದ್ರ ಅವರ ಆಪ್ತರು.ಅದೇ ರೀತಿ ಹೊಸಪೇಟೆಯ ಗಣಿ ಉದ್ಯಮಿ ಹೊಸಪೇಟೆಯ ಬಸವೇಶ್ವರ ಬಡಾವಣೆಯಲ್ಲಿರೋ ಶ್ರೀನಿವಾಸರೆಡ್ಡಿ ಮನೆಯ ಮೇಲೂ ದಾಳಿ ನಡೆದಿದೆ.

## ಹಳ್ಳಿಖೇಡ(ಬಿ) ಸೀಮಿನಾಗನಾಥ ಜಾತ್ರಾ ಮಹೋತ್ಸವ, ಪೂರ್ವ ಭಾವಿ ಸಭೆ



**ಹುಮನಾಬಾದ್,ಅ.16–** ತಾಲ್ಲೂಕಿನ ಹಳ್ಳಿಖೇಡ(ಬಿ)ನ್ ಸೀಮಿನಾಗನಾಥ ದೇವರ ಜಾತ್ರಾ ಮಹೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ಶಾಸಕ ಡಾ.ಸಿದ್ದಲಿಂಗಪ್ಪಾ ಪಾಟೀಲ ಅವರ ಅಧ್ಯಕ್ಷಯಲ್ಲಿ ಪುರ್ವ ಭಾವಿ ಸಭೆ ಜರುಗಿತು.

ಶಾಸಕ ಡಾ. ಸಿದ್ದು ಪಾಟೀಲ ಅವರು ಮಾತನಾಡಿ, ಹಳ್ಳಿಖೇಡ(ಬಿ)ನ್ ಸೀಮಿನಾಗನಾಥ ಜಾತ್ರಾ ಮಹೋತ್ಸವಕ್ಕೆ ಬೀದರ್ ಜಿಲ್ಲೆ ಸೇರಿದಂತೆ ನೆರೆಯ ತೆಲಂಗಾಣ, ಆಂಧ್ರಪ್ರದೇಶ ಹಾಗೂ ಮಹಾರಾಷ್ಟ್ರಗಳಿಂದ ಅಪಾರ ಭಕ್ತಾದಿಗಳು ಆಗಮಿಸುತ್ತಾರೆ, ಸೀಮಿನಾಗನಾಥ ದೇವರ ದರ್ಶನ ಪಡೆಯಲು ಆಗಮಿಸುವ ಭಕ್ತಾದಿಗಳಿಗೆ ಯಾವುದೇ ತರಹದ ಮೂಲ ಸೌಕರ್ಯಗಳ ಕೊರತೆ ಉಂಟಾಗದಂತೆ ಸಂಬಂಧ ಪಟ್ಟವರು ಮುಂಜಾಗ್ರತೆವಹಿಸಬೇಕು, ಜಾತ್ರಾ ಮಹೋತ್ಸವದಲ್ಲಿ ನೀರು, ವಸತಿ ಗೃಹ, ಸ್ನಾನಕುಂಡ, ವಿದ್ಯುತ್ ಸೇರಿದಂತೆ ಇನ್ನಿತರ ಸೌಲಭ್ಯಗಳ ಬಗ್ಗೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಜಾತ್ರಾ ಮಹೋತ್ಸವದಲ್ಲಿ ಯಾವುದೇ ಅಹಿತರ ಘಟನೆಗಳು ನಡೆಯದಂತೆ ದೇವಾಲಯದ ಸುತ್ತಲೂ, ಸಿ.ಸಿ.ಕ್ಯಾಮರಗಳನ್ನು ಅಳವಡಿಸಬೇಕು ಎಂದು ತಿಳಿಸಿದ ಅವರು ಸೀಮಿನಾಗನಾಥ ದೇವರ ಜಾತ್ರಾ ಮಹೋತ್ಸವದ ಯಶಸ್ವಿಗಾಗಿ ದೇವಾಲಯದ ಆಡಳಿತ ಅಧಿಕಾರಿ, ಸಿಂಬಂದಿ ವರ್ಗ, ಹಳ್ಳಿಖೇಡ(ಬಿ) ಪಟ್ಟಣದ ಸಾರ್ವಜನಿಕರು ಹಾಗೂ ಸಮಸ್ತ ಭಕ್ತಾದಿಗಳಿಗೂ ತಮ್ಮ ಸಹಾಯ, ಸಹಕಾರ ನೀಡುವುದಾಗಿ ಶಾಸಕ ಡಾ. ಸಿದ್ದು ಪಾಟೀಲ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಅಂಜುಮ್ ತಬ್ಬಸಮ್, ಯುವ ಉದ್ಯಮಿ ಸಂತೋಷ ಪಾಟೀಲ, ಪುರಸಭೆ ಮುಖ್ಯಾಧಿಕಾರಿ ಶಂಕರ ಪಾಟೀಲ, ದೇವಾಲಯದ ಕಾರ್ಯದರ್ಶಿ ಅನಿಲ ಸ್ವಾಮಿ, ಕಂದಾಯ ನಿರೀಕ್ಷಕ ರಾಹುಲ, ಇದ್ದರು.

## ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ: ಅಪರಾಧಿಗೆ ಜೀವಾವಧಿ ಶಿಕ್ಷೆ

**ಕಲಬುರಗಿ,ಅ.16–**ತಾಯಿಯನ್ನು ಕೊಲೆಗೈದು ಅವಳ ಅಪ್ರಾಪ್ತ ವಯಸ್ಸಿನ ಮಗಳನ್ನು ಅಪಹರಿಸಿ ಲೈಗಿಂಕ ದೌರ್ಜನ್ಯ ಎಸಗಿದ ಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಿ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ಮಿಲ್ಲತ್ ನಗರದ ಅಜಾದಪುರ ರಸ್ತೆಯ ಶಫಿಶೇಖ್ ಡಿ.ಕೆ. (22) ಶಿಕ್ಷೆಗೆ ಒಳಗಾದವ. 2024 ಮಾ.15 ರಂದು ನಗರದ ಸಬ್ ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಕೊಲೆ, ಪೋಕ್ಸೊ ಪ್ರಕರಣದ ಕುರಿತು ಪಿಐ ಮಹ್ಮದ್ ಫಸಿಯೋದ್ದೀನ್ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪತ್ರ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಅಪರಾಧಿಗೆ ಜೀವಾವಧಿ ಶಿಕ್ಷೆ, 20 ವರ್ಷ ಜೈಲು ಮತ್ತು 3.50 ಲಕ್ಷ ದಂಡ ವಿಧಿಸಿ ಆದೇಶ ನೀಡಿದ್ದಾರೆ. ಅಲ್ಲದೆ ನೊಂದ ಬಾಲಕಿಗೆ 5 ಲಕ್ಷ ರೂ.ಪರಿಹಾರ ನೀಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ.ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ವಾದ ಮಂಡಿಸಿದ್ದರು

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A  Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka  Editor: ANILKUMAR H